ಸಂಪುಟ : 10 ಸಂಚಿಕೆ: 293 ಪುಟ : 4+2 ಬೆಲೆ: 3.00 ಮಂಗಳವಾರ ಜನವರಿ 06 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 293 Pages : 4+2 Price : 3.00 Tuesday January 06 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಉಲ್ಲೇಖಿತ ಪತ್ರದನ್ವಯ ಸೇವಾ-ಸಿಂಧು ಇವರಿಂದ ಡಿ.ಬಿ.ಟಿ (ನೇರ ನಗದು ವರ್ಗಾವಣೆ) ಆನ್‌ಲೈನ್ ವೇದಿಕೆ ತಂತ್ರಾಂಶದಡಿ ಅಳವಡಿಸಲಾಗುತ್ತಿದೆ. ಈ ಯೋಜನೆಗಳನ್ನು ಆನ್ಲೈನ್ ವೇದಿಕೆಯಿಂದ ಅನುಷ್ಠಾನಗೊಳಿಸುವ ಉದ್ದೇಶದಿಂದ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆಯಡಿ ಡಿ.ಬಿ.ಟಿ (ನೇರ ನಗದು ವರ್ಗಾವಣೆ) ಆನಲೈನ್ ವೇದಿಕೆಯಲ್ಲಿ ಅಳವಡಿಸಲಾಗಿರುತ್ತದೆ.

ಅರ್ಜಿ ಸಲ್ಲಿಸಲು ಕೊನೆಯ ದಿನ ಜನವರಿ 31 ಆಗಿರುತ್ತದೆ. ಈ ಯೋಜನೆಯ ಸೌಲಭ್ಯವನ್ನು ಗದಗ ಜಿಲ್ಲೆಯಲ್ಲಿರುವ ಹೆಚ್ಚಿನ ವಿಕಲಚೇತನರು ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಿ ಯೋಜನೆಯ ಪ್ರಯೋಜನ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲೆಯ ತಾಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಮ್.ಆರ್.ಡಬ್ಲ್ಯೂಗಳಾದ ಖಾಜಾಹುಸೇನ ಕಾತರಕಿ, ತಾಲ್ಲೂಕ ಪಂಚಾಯತ್, ಗದಗ - 8867556465 ; ಬಸವರಾಜ ಓಲಿ, ತಾಲೂಕು ಪಂಚಾಯತ್, ರೋಣ - 9741615926 ; ಶಶಿಕಲಾ ವಡ್ಡಟ್ಟಿ, ತಾಲೂಕು ಪಂಚಾಯತ್, ಮುಂಡರಗಿ 9611922445 ; ಭಾರತಿ ಮುರಶಿಳ್ಳಿ, ತಾಲೂಕು ಪಂಚಾಯತ್, ಶಿರಹಟ್ಟಿ - 8951128679 ; ಶಿವಾನಂದ ಹಾದಿಮನಿ, ತಾಲೂಕು ಪಂಚಾಯತ್, ನರಗುಂದ - 9591679022 ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ: 029 ರ ದೂರವಾಣಿ ಸಂಖ್ಯೆ: 08372-220419 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾದಿಕಾರಿ ಕೆ.ಮಹಾಂತೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೆಕ್ಕೆಜೋಳ ಖರೀದಿ ಕೇಂದ್ರದಲ್ಲಿನ ಲೋಪ-ದೋಷಗಳನ್ನು ಸರಿಪಡಿಸುವ ಕುರಿತ ಸಭೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ

# ಒಂದು ವಾರದಲ್ಲಿ ಮೆಕ್ಕೆಜೋಳ ಖರೀದಿ ಪ್ರಕ್ರಿಯೆ ಪೂರ್ಣಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ಸರ್ಕಾರ ಮೆಕ್ಕೆಜೋಳ ಬೆಳೆದ ಎಲ್ಲ ರೈತರಿಗೆ ಘೋಷಣೆ ಮಾಡಿರುವ 250 ರೂ. ಪ್ರೋತ್ಸಾಹ ಧನವನ್ನು ಏಜೆಂಟರ ಹಾವಳಿ ತಪ್ಪಿಸಿ ನೇರವಾಗಿ ರೈತರ ಖಾತೆಗೆ ಜಮೆಯಾಗುವಂತೆ ನೋಡಿಕೊಳ್ಳಬೇಕು. ಒಂದು ವಾರದಲ್ಲಿ ಮೆಕ್ಕೆಜೋಳ ಖರೀದಿ ಪ್ರಕ್ರಿಯೆ ಪೂರ್ಣಗೊಳಿಸಬೇಕು ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.

ಸೋಮವಾರ ಗದಗನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮೆಕ್ಕೆಜೋಳ ಖರೀದಿ ಕೇಂದ್ರವನ್ನು ಪ್ರಾರಂಭಿಸುವ ಹಾಗೂ ಖರೀದಿ ಕೇಂದ್ರದಲ್ಲಿ ಆಗಿರುವ ಲೋಪ-ದೋಷಗಳನ್ನು ಸರಿಪಡಿಸುವ ಸಲುವಾಗಿ ಜಿಲ್ಲಾಧಿಕಾರಿಗಳು ಹಾಗೂ ರೈತ ಮುಖಂಡರುಗಳ ಸಭೆ ಉದ್ದೇಶಿಸಿ ಮಾತನಾಡಿದರು.

ಖರೀದಿ ಕೇಂದ್ರಕ್ಕೆ ತರುವ ಮೆಕ್ಕೆಜೋಳ ಖರೀದಿ ಪ್ರಕ್ರಿಯೆಯನ್ನು ಒಂದು ವಾರದಲ್ಲಿ ಪೂರ್ಣಗೊಳಿಸಬೇಕು. ಸರ್ಕಾರ ಘೋಷಣೆ ಮಾಡಿರುವ ಹೊಸ ಯೋಜನೆಯಲ್ಲಿ ಅವ್ಯವಹಾರ ಆಗುವ ಆತಂಕ ಇದೆ. ಹಿಂದೆ ಹುಬ್ಬಳ್ಳಿಯಲ್ಲಿ ಈರುಳ್ಳಿ ಖರೀದಿ ಸಂದರ್ಭದಲ್ಲಿ ಅವ್ಯವಹಾರ ಆಗಿತ್ತು. ಗೋವಿನ ಜೋಳ ಖರೀದಿ ಸಂದರ್ಭದಲ್ಲಿಯೂ ಆಗಿತ್ತು. ಸರ್ಕಾರದ ಯೋಜನೆಯ ದುರ್ಲಾಭ ಪಡೆದುಕೊಳ್ಳುವವರೂ ಇರುತ್ತಾರೆ. ಈ ಬಗ್ಗೆ ಎಚ್ಚರ ವಹಿಸಬೇಕು. ಈಗಾಗಲೇ ಏಜೆಂಟರು ಹುಟ್ಟಿಕೊಂಡಿರುತ್ತಾರೆ. ನಿಜವಾದ ರೈತರ ಸಂಪೂರ್ಣ ಮಾಹಿತಿ ಪಡೆದು ಅವರು ಮಾರಿರುವ ಮೆಕ್ಕೆ ಜೋಳದ ಹಣವನ್ನು ನೇರವಾಗಿ ರೈತರ ಖಾತೆಗೆ ಜಮೆ ಮಾಡಬೇಕು. ಇದರಲ್ಲಿ ಯಾವುದೇ ರೀತಿಯ ತಾರತಮ್ಯ, ಪಕ್ಷಪಾತ, ರಾಜಕಾರಣ ತರಬಾರದು. ಮೆಕ್ಕೆ ಜೋಳ ಬೆಳೆದ ರಾಜ್ಯದ ಎಲ್ಲ ರೈತರಿಗೂ ಇದರ ಸದುಪಯೋಗ ತಲುಪಬೇಕು.

ಒಂದು ವಾರದಲ್ಲಿ ಸಂಪೂರ್ಣ ಖರೀದಿ ಪ್ರಕ್ರಿಯೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.


ಶಾಸಕರಾದ ಸಿ.ಸಿ. ಪಾಟೀಲ ಮಾತನಾಡಿ, ಅರ್ಹರಿಗೆ ಸರ್ಕಾರದ ನೆರವು ತಲುಪಲಿ, ಈ ಪ್ರಕ್ರಿಯೆ ಅನುಷ್ಠಾನದಲ್ಲಿ ಅಕ್ರಮ ಆಗದಿರಲಿ ಎಂದರು.

ಈ ಸಂದರ್ಭದಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಸೇರಿದಂತೆ ಅಧಿಕಾರಿಗಳು ಹಾಗೂ ರೈತರು ಉಪಸ್ಥಿತರಿದ್ದರು.

> ಕಳೆದ ವರ್ಷ ಮೆಕ್ಕೆಜೋಳಕ್ಕೆ 2 ಸಾವಿರ ರೂ ಮೇಲೆ ದರ ಸಿಗುತ್ತಿತ್ತು. ಈ ವರ್ಷ ದರ ಸಂಪೂರ್ಣ ಕುಸಿದಿದೆ. ರೈತರು ಬಹಳ ಸಂಕಷ್ಟದಲ್ಲಿ ಸಿಲುಕಿದ್ದಾರೆ. ಗದಗ ಜಿಲ್ಲೆಯ ರೈತರು ವಿಶೇಷವಾಗಿ ಲಕ್ಷ್ಮೇಶ್ವರದಲ್ಲಿ ಬೃಹತ್ ಪ್ರತಿಭಟನೆ ಮಾಡಿದ್ದರು. ಅಲ್ಲಿಗೆ ಜಿಲ್ಲಾಧಿಕಾರಿಗಳು ಬಂದು ಸರ್ಕಾರಕ್ಕೆ ಎಲ್ಲ ಮಾಹಿತಿ ನೀಡಿದ್ದಾರೆ. ಸರ್ಕಾರ ಮೊದಲು 10 ಲಕ್ಷ ಮೆಟ್ರಿಕ್ ಟನ್ ತೆಗೆದುಕೊಳ್ಳುವುದಾಗಿ ಹೇಳಿದ್ದರು. ಈಗ ಖರೀದಿ ಬಹಳ ಮಂದಗತಿಯಲ್ಲಿ ನಡೆಯುತ್ತಿದೆ. ಇದುವರೆಗೂ ಒಂದು ಲಕ್ಷ ಟನ್ ಕೂಡ ಖರೀದಿಯಾಗಿಲ್ಲ. ಖರೀದಿ ಕೇಂದ್ರದಲ್ಲಿ ಸರಿಯಾದ ವ್ಯವಸ್ಥೆ ಇಲ್ಲ.
>
> - ಬಸವರಾಜ ಬೊಮ್ಮಾಯಿ.
> ಸಂಸದರು, ಹಾವೇರಿ-ಗದಗ.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಮಾತನಾಡಿ, ಮಾರುಕಟ್ಟೆ ಧಾರಣೆ ಪ್ರತಿ ಕ್ವಿಂಟಲ್‌ಗೆ 1900 ರೂ ಅಥವಾ ಅದಕ್ಕಿಂತ ಕಡಿಮೆ ದರದಲ್ಲಿ ಮಾರಾಟ ಆದರೆ ಪ್ರತಿ ಕ್ವಿಂಟಲ್‌ಗೆ ಗರಿಷ್ಠ 250 ರೂನಂತೆ ಪಾವತಿಸಲಾಗುವುದು. ಈ ಯೋಜನೆಯನ್ನು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಸಂಸ್ಥೆಯ ಮೂಲಕ ಅನಿಷ್ಠಾನ ಮಾಡಲಾಗುತ್ತದೆ ಎಂದು ವಿವರಿಸಿದರು.

## ಎಲ್‌ಪಿಜಿ ಬಳಸುವಾಗ ಎಚ್ಚರಿಕೆ ವಹಿಸಿ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಇತ್ತೀಚೆಗೆ ಧಾರವಾಡ ಜನ್ನತ ನಗರದ ಮನೆಯೊಂದರಲ್ಲಿ ಆಕಸ್ಮಿಕವಾಗಿ ಸಿಲಿಂಡರ್ ಸ್ಫೋಟಗೊಂಡು ಗಾಯಗೊಂಡ ಗಾಯಾಳುಗಳನ್ನು ಕರ್ನಾಟಕ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ (ಕೆಎಂಸಿಆರ್‌ಐ)ಯಲ್ಲಿ ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಭೇಟಿ ಮಾಡಿ, ಆರೋಗ್ಯ ವಿಚಾರಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಡುಗೆ ಅನಿಲ ಸೋರಿಕೆಯಾಗಿ ಮನೆ ತುಂಬಿಕೊಂಡು ಅವಘಡ ಸಂಭವಿಸಿದೆ. ಆಫ್ರಿನ್ ಎಂಬ ಮಹಿಳೆ ಶೇ. 80ರಷ್ಟು ಸುಟ್ಟು ಹೋಗಿದ್ದಾರೆ. ಉಳಿದವರು ಬೆಂಕಿಯಿಂದ ಸುಟ್ಟು ಗಾಯಗೊಂಡಿದ್ದಾರೆ.

ಅವರ ಚಿಕಿತ್ಸಾ ಕಾರ್ಯ ಮುಂದುವರೆದಿದೆ. ಚಳಿಗಾಲದಲ್ಲಿ ಅಡುಗೆ ಅನಿಲ ಸೋರಿಕೆ ಆಗುತ್ತಿದೆ. ಕಳೆದ ಬಾರಿ ಸಹ ಇದೇ ರೀತಿಯಾಗಿತ್ತು. ಈ ಬಗ್ಗೆ ಅಧ್ಯಯನ ಮಾಡಬೇಕಿದೆ. ಸಾರ್ವಜನಿಕರು ಅಡುಗೆ ಅನಿಲ ಬಳಸುವಾಗ ಎಚ್ಚರಿಕೆ ವಹಿಸುವುದು ಅಗತ್ಯವಿದೆ ಎಂದರು.

ಇದೇ ಸಂದರ್ಭದಲ್ಲಿ ಗಾಯಾಳುಗಳ ಚಿಕಿತ್ಸೆ ಕುರಿತು ವೈದ್ಯರಿಂದ ಮಾಹಿತಿ ಪಡೆದುಕೊಂಡರು. ಸಚಿವರು ಗಾಯಾಳುಗಳ ಕುಟುಂಬಸ್ಥರಿಗೆ ವೈಯಕ್ತಿಕವಾಗಿ ಧನಸಹಾಯ ಮಾಡಿದರು. ಈ ಸಂದರ್ಭದಲ್ಲಿ ಶಾಸಕರಾದ ಎನ್.ಎಚ್. ಕೋನರಡ್ಡಿ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಡಿಸಿಪಿ ಮಹಾನಿಂಗ ನಂದಗಾವಿ, ಹುಬ್ಬಳ್ಳಿ ಶಹರ ತಹಸೀಲ್ದಾರರಾದ ಮಹೇಶ ಭಗವಂತ ಗಸ್ತೆ, ಕೆಎಂಸಿಆರ್‌ಐ ವೈದ್ಯರು ಉಪಸ್ಥಿತರಿದ್ದರು.

### 'ಅಕ್ಕ ಪಡೆ' ಲೋಕಾರ್ಪಣೆಗೊಳಿಸಿದ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್

# 'ಅಕ್ಕ ಪಡೆ'ಯಿಂದ ತ್ವರಿತ ರಕ್ಷಣೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯ ಸರ್ಕಾರವು ಪ್ರತಿ ಜಿಲ್ಲೆಯಲ್ಲಿ ಮಹಿಳೆಯರ ರಕ್ಷಣೆಗಾಗಿ ತುರ್ತಾಗಿ ಸ್ಪಂದಿಸಲು ಅನುಕೂಲವಾಗುವಂತೆ ಮಹಿಳೆಯರೇ ಆರಕ್ಷಕರಿರುವ 'ಅಕ್ಕ ಪಡೆ'ಯನ್ನು ಆರಂಭಿಸಿದೆ. ಅದರಂತೆ ಧಾರವಾಡ ಜಿಲ್ಲೆಯ ಮಹಾನಗರ ಪೊಲೀಸ್ ಇಲಾಖೆಗೆ ಪ್ರತ್ಯೇಕ ವಾಹನ ಹೊಂದಿರುವ ಅಕ್ಕ ಪಡೆಯನ್ನು ಸೋಮವಾರ ಸೃಜನಾ ರಂಗಮಂದಿರ ಮುಂಭಾಗದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹಾಗೂ ಜಿಲ್ಲಾಧಿಕಾರಿ ದಿವ್ಯ ಪ್ರಭು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಸಚಿವ ಸಂತೋಷ ಲಾಡ್ ಮಾತನಾಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಕರ್ನಾಟಕ ರಾಜ್ಯ ಮಹಿಳಾ ಗೃಹರಕ್ಷಕರನ್ನೊಳಗೊಂಡ ಅಕ್ಕ ಪಡೆಯನ್ನು ರಚಿಸಿದೆ. ಅಪಾಯದಲ್ಲಿರುವ ಅಥವಾ ಸಂಕಷ್ಟದಲ್ಲಿರುವ ದುರ್ಬಲ ಮಹಿಳೆಯರು ಮತ್ತು ಮಕ್ಕಳಿಗೆ ತಕ್ಷಣದ ರಕ್ಷಣೆ ನೀಡುವುದು ಅಕ್ಕ ಪಡೆಯ ಪ್ರಾಥಮಿಕ ಉದ್ದೇಶ. ಸಹಾನುಭೂತಿ ಮತ್ತು ಸಮುದಾಯ ಸೇವೆಯಲ್ಲಿ ಚಾಲಿತವಾಗಿರುವ ಅಕ್ಕ ಪಡೆ ಸಮಾಜದಲ್ಲಿ ಸ್ಪಂದಿಸುವ ಸುರಕ್ಷತಾ ಘಟಕವಾಗಿ ಮತ್ತು ಶೈಕ್ಷಣಿಕ ಶಕ್ತಿಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದರು.

ದೌರ್ಜನ್ಯ, ಹಿಂಸೆ, ನಿರ್ಲಕ್ಷ್ಯ ಅಥವಾ ಶೋಷಣೆ ಎದುರಿಸುತ್ತಿರುವ ಮಹಿಳೆಯರು ಮತ್ತು ಮಕ್ಕಳಿಗೆ ಸಕಾಲಿಕ ರಕ್ಷಣೆ ಒದಗಿಸುವುದು ಅಕ್ಕ ಪಡೆಯ ಉದ್ದೇಶವಾಗಿದೆ. ಶಿಕ್ಷಣದ ಮೂಲಕ ಹಕ್ಕುಗಳು, ಕಾನೂನುಗಳು, ಸುರಕ್ಷತಾ ಕ್ರಮಗಳು ಮತ್ತು ಲಭ್ಯವಿರುವ ಬೆಂಬಲ ವ್ಯವಸ್ಥೆಗಳ ಬಗ್ಗೆ ಜಾಗೃತಿ ಮೂಡಿಸುವದು ಮತ್ತು ಸಮಾಜದಲ್ಲಿ ಮಹಿಳೆಯರ ಮತ್ತು ಮಕ್ಕಳ ಮೇಲಿನ ದೌರ್ಜನ್ಯ ತಡೆದು, ಕಾನೂನಿನ ರಕ್ಷಣೆಯೊಂದಿಗೆ ಭಯಮುಕ್ತ ವಾತಾವರಣ ಸೃಷ್ಟಿಸುವುದು ಅಕ್ಕ ಪಡೆಯ ಗುರಿಯಾಗಿದೆ.



ಅಕ್ಕ ಪಡೆಯು, ಮಕ್ಕಳ ಕಲ್ಯಾಣ ಸಮಿತಿಗಳು, ಮಹಿಳಾ ಸಹಾಯವಾಣಿ, ಸರ್ಕಾರೇತರ ಸಂಸ್ಥೆಗಳು, ಕಾನೂನು ನೆರವು ಮತ್ತು ಆಶ್ರಯ ತಾಣಗಳೊಂದಿಗೆ ಸುಗಮ ಸಂಪರ್ಕ ಕಲ್ಪಿಸಿ ಬೆಂಬಲವನ್ನು ನೀಡುತ್ತದೆ. ವಿಶ್ವಾಸ ವರ್ಧನೆ, ಸಮುದಾಯದಲ್ಲಿ ಸ್ನೇಹಪರ ಮತ್ತು ವಿಶ್ವಾಸಾರ್ಹ ಸ್ಥಿತಿಯನ್ನು ಸ್ಥಾಪಿಸುವುದು, ಸಂತ್ರಸ್ತೆಯರು ಮತ್ತು ಕುಟುಂಬಗಳು ಭಯವಿಲ್ಲದೆ ಸಹಾಯ ಪಡೆಯಲು ಪ್ರೋತ್ಸಾಹಿಸುತ್ತದೆ.

ಜಿಲ್ಲಾ ಮಟ್ಟದಲ್ಲಿ ಮಹಿಳಾ ಗೃಹ ರಕ್ಷಕರನ್ನೊಳಗೊಂಡ ಅಕ್ಕ ಪಡೆ ತಂಡವು ಸ್ಥಳೀಯ ಪೊಲೀಸರ ನಿಕಟ ಸಹಯೋಗದೊಂದಿಗೆ ಬೆಳಿಗ್ಗೆ 7ರಿಂದ ರಾತ್ರಿ 8 ಗಂಟೆಯವರೆಗೆ ಎರಡು ಪಾಳಿಗಳಲ್ಲಿ ಕಾರ್ಯನಿರ್ವಹಿಸುತ್ತದೆ. ತಂಡದ ಸದಸ್ಯರನ್ನು ಶಾಲೆ, ಕಾಲೇಜು, ಬಾಲಕಿಯರ, ಮಹಿಳಾ ಹಾಸ್ಟೆಲ್, ಬಸ್, ರೈಲ್ವೆ ನಿಲ್ದಾಣಗಳು, ಸ್ಥಳೀಯ ಮಾರುಕಟ್ಟೆ, ಪ್ರೇಕ್ಷಣೀಯ ಮತ್ತು ಪವಿತ್ರ ಸ್ಥಳಗಳಲ್ಲಿ ನಿಯೋಜಿಸಲಾಗಿದೆ.

### ಸಂಸದರ ಕ್ರೀಡಾ ಮಹೋತ್ಸವ ಪೂರ್ವ ಸಿದ್ಧತಾ ಸಭೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಸೂಚನೆ

# ಫೆಬ್ರುವರಿ ಮೊದಲ ವಾರದಲ್ಲಿ ಕ್ರೀಡಾ ಮಹೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ಕ್ರೀಡೆಗಳಲ್ಲಿ ಗ್ರಾಮೀಣ ಪ್ರದೇಶಗಳ ಯುವಕರನ್ನು ಆಸಕ್ತಿಯಿಂದ ಬಳಸಿಕೊಳ್ಳಲು ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಸಂಸದರ ಕ್ರೀಡಾ ಮಹೋತ್ಸವ ಏರ್ಪಡಿಸಿದ್ದಾರೆ. ಗದಗ ಜಿಲ್ಲೆಯಲ್ಲಿ ಫೆಬ್ರುವರಿ ಮೊದಲ ವಾರದಲ್ಲಿ ಕ್ರೀಡಾ ಮಹೋತ್ಸವ ನಡೆಸಲು ಎಲ್ಲ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಧಿಕಾರಿಗಳಿಗೆ ಸೂಚಿಸಿದರು.

ಗದಗ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ಸಂಸದರ ಕ್ರೀಡಾ ಮಹೋತ್ಸವದ ಪೂರ್ವಸಿದ್ಧತಾ ಸಭೆ ನಡೆಸಿದ ಅವರು, ಕೇಂದ್ರ ಸರ್ಕಾರ ಕ್ರೀಡೆಗೆ ಮಹತ್ವ ನೀಡಿದೆ. ಕಳೆದ ಹತ್ತು ವರ್ಷದಿಂದ ಫಿಟ್ ಇಂಡಿಂ-ಯಾ ಕಾರ್ಯಕ್ರಮ ಮಾಡಿದ್ದೆವು. ನಂತರ ಖೇಲೊ ಇಂಡಿಯಾ, ಜೀತೊ ಇಂಡಿಯಾ ಮಾಡಿದೆವು. ಅದರಿಂದ ಒಲಂಪಿಕ್‌ನಲ್ಲಿ ಭಾರತ ಹೆಚ್ಚು ಮೆಡಲ್ ಪಡೆಯಲು ಸಾಧ್ಯವಾಯಿತು. ಈಗ ಗ್ರಾಮೀಣ ಪ್ರದೇಶಗಳಲ್ಲಿ ಯುವಕರನ್ನು ಆಸಕ್ತಿಯಿಂದ ಬಳಸಿಕೊಳ್ಳಲು ಸಂಸದರ ಕ್ರೀಡೋತ್ಸವ ಮಾಡಿದ್ದಾರೆ. ಈ ಕ್ರೀಡೆ ಹೋಬಳಿಯಿಂದ ತಾಲೂಕು ಮಟ್ಟ, ಅಲ್ಲಿಂದ ಜಿಲ್ಲಾ ಮಟ್ಟದಲ್ಲಿರುತ್ತದೆ. ಇದ-ಕ್ಕೆ ಶಿಕ್ಷಣ ಹಾಗೂ ಆರೋಗ್ಯ ಇಲಾಖೆಯ ಸಹಕಾರ ಬೇಕು. ಎಲ್ಲ ಇಲಾಖೆಗಳ ಸಹಕಾರ ಅಗತ್ಯ. ಮಂಗಳವಾರದಿಂದಲೇ ನೋಂದಣಿ ಕಾರ್ಯ ಆರಂಭಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಶಾಸಕರುಗಳಾದ ಸಿ.ಸಿ. ಪಾಟೀಲ್, ಡಾ ಚಂದ್ರು ಲಮಾಣಿ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಜಿಲ್ಲಾ ಯುವಜನ, ಕ್ರೀಡಾ ಮತ್ತು ಸೇವಾ ಇಲಾಖೆಯ ಅಧಿಕಾರಿ ಶರಣು ಗೋಗೇರಿ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಇರುವ ಒಳ್ಳೆಯ ತಂಡಗಳನ್ನು ಆಹ್ವಾನಿಸಿ, ಹೆಚ್ಚು ಯುವಕ-ಯುವತಿಯರು ಪಾಲ್ಗೊಳ್ಳಲು ಅವಕಾಶ ಕಲ್ಪಿಸಬೇಕು. ಎಲ್ಲ ತಂಡಗಳಿಗೂ ಟಿಶರ್ಟ್ ನೀಡಬೇಕು.

ವಿಜೇತರಾದ ತಂಡಗಳಿಗೆ ಬಹುಮಾನ ನೀಡುವ ವ್ಯವಸ್ಥೆ ಮಾಡಬೇಕು. ಕೊನೆಯ ದಿನ ಸರ್ಕಾರಿ ನೌಕರರಿಗೆ ಒಂದು ದಿನ ಪ್ರದರ್ಶನ ಮ್ಯಾಚ್ ಆಡಿಸಿ ಅವರಿಗೂ ಬಹುಮಾನ ವಿತರಿಸುವ ಸಿದ್ಧತೆಯಾಗಲಿ ಎಂದು ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದರು.

## ಅಬಕಾರಿ ಸಿಬ್ಬಂದಿಗಳು ರಾಜ್ಯ ಮಟ್ಟಕ್ಕೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ರೋಣ

ಗದಗ ಜಿಲ್ಲಾ ಸರ್ಕಾರಿ ನೌಕರರ ಸಂಘ ಏರ್ಪಡಿಸಿದ್ದ ವಾರ್ಷಿಕ ಕ್ರೀಡಾಕೂಟಗಳಲ್ಲಿ ಜರುಗಿದ ಭಾರ ಎತ್ತುವ ಸ್ಪರ್ಧೆಯಲ್ಲಿ ರೋಣ ತಾಲೂಕಿನ ಅಬಕಾರಿ ಇಲಾಖೆಯ ಸಿಬ್ಬಂದಿಗಳು ಜಯ ಗಳಿಸುವ ಮೂಲಕ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ರೋಣ ಅಬಕಾರಿ ಉಪ ನಿರೀಕ್ಷಕ ಜಗದೀಶ ಆಲದಕಟ್ಟಿ 108 ಕೆಜಿ ವಿಭಾಗದಲ್ಲಿ ಪ್ರಥಮ ಸ್ಥಾನ, ದ್ವಿತೀಯ ದರ್ಜೆ ಸಹಾಯಕರು ಹಾಗೂ ತಾಲೂಕಾ ನೌಕರರ ಸಂಘದ ಉಪಾಧ್ಯಕ್ಷ ಭರತಕುಮಾರ ಹಾದಿಮನಿ 56 ಕೆಜಿ ವಿಭಾಗದಲ್ಲಿ ಪ್ರಥಮ ಹಾಗೂ ಜಿಲ್ಲಾ ಅಬಕಾರಿ ಉಪ ಆಯುಕ್ತರ ಕಚೇರಿ ಪೇದೆ ನಿಂಗಪ್ಪ ಶಿರಗುಪ್ಪಿ 86 ಕೆಜಿ ವಿಭಾಗದಲ್ಲಿ ಜಯಗಳಿಸುವ ಮೂಲಕ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದು, ಜಿಲ್ಲಾ ಮಟ್ಟದ ಅಬಕಾರಿ ಇಲಾಖೆಯ ಹಿರಿಯ ಅಧಿಕಾರಿಗಳು ವಿಜೇತ ಕ್ರೀಡಾಳುಗಳನ್ನು ಅಭಿನಂದಿಸಿದ್ದಾರೆ.

# ಕಪ್ಪತ್ತಗಿರಿ ಫೌಂಡೇಶನ್ ಜಿಲ್ಲಾಧ್ಯಕ್ಷರ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ

ದಾವಣಗೆರೆಯ ಪತ್ರಕರ್ತರು, ಸಾಹಿತಿಗಳು ಕ್ರಿಯಾಶೀಲ ಬರಹಗಾರರಾದ ಎ.ಬಿ. ರುದ್ರಮ್ಮ ಇವರು ಕಪ್ಪತ್ತಗಿರಿ ಫೌಂಡೇಶನ್ ಬಳಗದ ಎಲ್ಲ ನಿಭಂದನೆಗಳನ್ನು ಒಪ್ಪಿಕೊಂಡು ಕನ್ನಡ, ನೆಲ, ಜಲ, ಸಾಹಿತ್ಯಕ್ಕಾಗಿ ತನು-ಮನ-ಧನದಿಂದ ತಮ್ಮ ಸೇವೆಯನ್ನು ಸಲ್ಲಿಸುತ್ತಾರೆಂಬ ವಿಶ್ವಾಸದಿಂದ ಕಪ್ಪತ್ತಗಿರಿ ಸಾಹಿತ್ಯ ವೇದಿಕೆಯ ದಾವಣಗೆರೆ ಜಿಲ್ಲಾ ಘಟಕದ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ಕಪ್ಪತ್ತಗಿರಿ



ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷರಾದ ಚಂದ್ರಕಲಾ ಇಟಗಿಮಠ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತ ಬಾಂಧವರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಹಿಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಈಗಾಗಲೆ ಪ್ರಾರಂಭವಾಗಿದ್ದು, ಗದಗ ತಾಲೂಕಿನ ರೈತರು ಗೂಗಲ್ ಪ್ಲೇ ಸ್ಟೋರ್ ಮೂಲಕ ಹಿಂಗಾರು ರೈತರ ಬೆಳೆ ಸಮೀಕ್ಷೆ 2025 ಆ್ಯಪ್ ಅನ್ನು ಡೌನ್ಲೋಡ್ ಮಾಡಿಕೊಂಡು ಬೆಳೆ ವಿವರ ಖುದ್ದಾಗಿ ದಾಖಲಿಸಬೇಕಾಗಿದೆ.

ಹೀಗೆ ವಿವರಗಳನ್ನು ದಾಖಲಿಸುವುದರಿಂದ ರೈತರಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆ, ಬೆಳೆ ವಿಮೆ ಯೋಜನೆ, ಬರಗಾಲ ಮತ್ತು ಪ್ರವಾಹ ಸಂದರ್ಭಗಳಲ್ಲಿ ಬರ ನಷ್ಟ ಪರಿಹಾರ ಪಡೆಯಲು, ಪಹಣಿಯಲ್ಲಿ ಬೆಳೆ ವಿವರ ದಾಖಲಿಸಲು, ಬೆಳೆಸಾಲ ಪಡೆಯುವಲ್ಲಿ ರೈತರಿಗೆ ಅನುಕೂಲವಾಗಲಿದೆ.

ಎಲ್ಲ ರೈತರು ಬೆಳೆ ವಿವರಗಳನ್ನು ತ್ವರಿತವಾಗಿ ಬೆಳೆ ಸಮೀಕ್ಷೆ ಆ್ಯಪ್ ನಲ್ಲಿ ದಾಖಲಿಸಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು. ರೈತರು ಬೆಳೆ ವಿವರಗಳನ್ನು ಅಪ್ಲೋಡ್ ಮಾಡದೆ ಇದ್ದಲ್ಲಿ ಸರಕಾರದ ಯೋಜನೆಯಿಂದ ವಂಚಿತರಾಗುವ ಸಾಧ್ಯತೆ ಇರುವುದರಿಂದ ತುರ್ತಾಗಿ ಬೆಳೆ ವಿವರಗಳನ್ನು ದಾಖಲಿಸಬೇಕು.

ಮಾಹಿತಿಗಾಗಿ ತಮ್ಮ ಗ್ರಾಮದ ಖಾಸಗಿ ನಿವಾಸಿ, ಕಂದಾಯ, ಕೃಷಿ, ತೋಟಗಾರಿಕೆ, ರೇಷ್ಮೆ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಬಹುದು ಅಥವಾ ಸಹಾಯವಾಣಿ ಸಂಖ್ಯೆ -18004253553 ಗೆ ಕರೆ ಮಾಡಲು ಗದಗ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮರ್ಯಾದೆಗೇಡು ಹತ್ಯೆ... ಒಂದು ಜಿಜ್ಞಾಸೆ

# ಕೊಂದು ಉಳಿಸಿಕೊಳ್ಳಬೇಕಾದ ಧರ್ಮ ಯಾವುದು?!

ಅಲ್ಲೆಲ್ಲೋ ದೂರದ ಉತ್ತರ ಭಾರತದಲ್ಲಿ ನಡೆಯುತ್ತಿದ್ದವು ಎಂದು ನಾವೆಲ್ಲ ಕೇಳಿ ಅಚ್ಚರಿ ಪಡುತ್ತಿದ್ದ ಮರ್ಯಾದೆ(ಗೇಡು)! ಹತ್ಯೆಗಳು ಇತ್ತೀಚಿನ ಒಂದೆರಡು ವರ್ಷಗಳಲ್ಲಿ ಕರ್ನಾಟಕದ ಮನೆ ಅಂಗಳದಲ್ಲಿ ಜೋರಾಗಿ ಸದ್ದು ಮಾಡುತ್ತಿವೆ.

ಅಲ್ಲೊಬ್ಬ ತಾಯಿ ಹೇಳುತ್ತಿದ್ದಳು ಹೌದು ನನ್ನ ಮಗಳು ಅನ್ಯ ಕೋಮಿನ ಯುವಕನನ್ನು ಇಷ್ಟಪಟ್ಟಳು. ಪ್ರಾರಂಭದಲ್ಲಿ ನಾವು ಕೂಡ ಸಾಕಷ್ಟು ವಿರೋಧಿಸಿದೆವು. ದೂರವಾಗಿಸುವ ಪ್ರಯತ್ನವನ್ನು ಮಾಡಿದೆವು. ಅದು ಸಾಧ್ಯವಾಗದೇ ಹೋದಾಗ ಒಂದು ಕ್ಷಣ ಸ್ವತಃ ತಾಯಿಯಾಗಿ ನಾನು ಆಕೆ ಸತ್ತು ಬಿಡಲಿ ಎಂದೇ ಆಶಿಸಿದೆ. ಅದರಲ್ಲೂ ನನ್ನ ಆಶಯ ಹೇಗಿತ್ತೆಂದರೆ ಹರೆಯದ ವಯಸ್ಸಿನ ಆಕೆಯ ಸಾವು ನೋಡುವವರ ಕಣ್ಣಿಗೆ ಆಕಸ್ಮಿಕವಾಗಿ ಕಾಣಲಿ ಎಂದು. ಸಾಮಾಜಿಕವಾಗಿ ಆಕೆಯ ಮೇಲಾಗಲಿ ಅಥವಾ ನಮ್ಮ ಮೇಲಾಗಲಿ ಯಾವ ಅಪವಾದ ಬರದಿರಲಿ ಎಂಬುದು ನನ್ನ ಭಾವವಾಗಿತ್ತು.

ಹೀಗೊಂದು ಭಾವ ನನ್ನಲ್ಲಿ ಉದಿಸಿದ ಕೆಲವೇ ಕ್ಷಣಗಳಲ್ಲಿ ನನ್ನಲ್ಲಿನ ಮಾನವೀಯ ಪ್ರಜ್ಞೆ ಜಾಗೃತಗೊಂಡಿತು. ಆಕೆ ಸಾಯಲಿ ಎಂದು ನಾನು ಬಯಸಿದ ಮರುಕ್ಷಣವೇ ನನ್ನ ಮತ್ತು ಆಕೆಯ ನಡುವಿನ ಬಂಧ ತಾಯಿ-ಮಕ್ಕಳದಾಗಿರದೆ ಲೋಕದ ದೃಷ್ಟಿಯ ವ್ಯಾವಹಾರಿಕ ಬಂಧವೇ ಎನ್ನಿಸಿತು. ತಾಯಿಯಾದವಳು ತನ್ನ ಮಗಳು ಸಾಯಲಿ ಎಂದು ಬಯಸುವವಳಾದರೆ ಆಕೆಯ ಬದುಕಿನ ಮೇಲಿನ ನನ್ನ ಹಕ್ಕು ಕಳೆದುಹೋಯಿತು ಎಂದು ನನಗನ್ನಿಸಿದ ಮರುಕ್ಷಣ ನಾನು ಆಕೆ ಸಾಯಲಿ ಎಂಬ ವಿಚಾರವನ್ನು ತೆಗೆದು ಹಾಕಿದೆ. ಆಕೆಯ ಪ್ರೀತಿ ನಮಗೆ ಬೇಡ ಎಂದಾದರೆ ಸರಿ, ಆಕೆ ಪ್ರೀತಿಸಿದ ಯುವಕನಿಗೆ ಹಾಗೂ ಆಕೆಯನ್ನು




ಪ್ರೀತಿಸಿದ ನನ್ನ ಮಗಳು. ಅವರಿಬ್ಬರಿಗೂ ಒಬ್ಬರಿಗೊಬ್ಬರು ಬೇಕಲ್ಲವೇ? ಮದುವೆಯಾಗಿ ದೂರ ಎಲ್ಲಾದರೂ ಬದುಕಿಕೊಳ್ಳಲಿ ಎಂಬ ಭಾವ ಮನದಲ್ಲಿ ಸ್ಫುರಿಸಿತು. ಇದೇ ವಿಷಯವನ್ನು ಮತ್ತೆ ಮತ್ತೆ ಯೋಚಿಸಿದಾಗ ಮನದ ಮೂಲೆಯಲ್ಲೊಂದು ರೀತಿಯ ನಿರಾಳ ಭಾವ ಮೂಡಿತು ಎಂದು ಆಕೆ ಹೇಳಿದಳು.

ಸಂಪ್ರದಾಯ ಹಾಗೂ ಆಧುನಿಕತೆಗಳ ಸಂಗಮವಾಗಿರುವ ಜನರಲ್ಲಿ ವೈಚಾರಿಕ ಚಿಂತನೆಯನ್ನು ಮೂಡಿಸುವ ನಿಟ್ಟಿನಲ್ಲಿ ಯಶಸ್ವಿಯಾಗಿರುವ ಸದ್ಗುರು ಎಂಬ ಹೆಸರಿನಿಂದ ಖ್ಯಾತರಾಗಿರುವ ಈಶ ಫೌಂಡೇಶನ್‌ನ ಜಗ್ಗಿ ವಾಸುದೇವ್ ಅವರು ಹೇಳುವ ಹಾಗೆ ಈ ಹಿಂದೆ ಕುಂಬಾರನ ಮಗ ಕುಂಬಾರ, ರೈತನ ಮಗ ರೈತ, ಅಕ್ಕಸಾಲಿಯ ಮಗ ಅಕ್ಕಸಾಲಿ ಹೀಗೆ ಕೌಟುಂಬಿಕ ವೃತ್ತಿಗಳನ್ನು ಕೈಗೊಳ್ಳುತ್ತಿರುವ ಸಮಯದಲ್ಲಿ ಆಯಾ ಜಾತಿಯ ವಧು-ವರರನ್ನು ಮದುವೆ ಮಾಡಿಸಲು ಹಾತೊರೆಯಲು ಕಾರಣವಾಗಿದ್ದು ಅವರು ಕೈಗೊಳ್ಳುತ್ತಿದ್ದ ವೃತ್ತಿಗಳ ಮುಂದುವರಿಕೆಯೇ ಆಗಿತ್ತು.

ಆದರೆ ಪ್ರಸ್ತುತ ದಿನಮಾನಗಳಲ್ಲಿ ಯಾರೂ ಕೂಡ ಕೌಟುಂಬಿಕ ವೃತ್ತಿಗಳನ್ನು ಅಷ್ಟಾಗಿ ಗಂಭೀರವಾಗಿ ಪರಿಗಣಿಸದೆ ತಮ್ಮ ಓದು ಹಾಗೂ ವಿದ್ಯೆಯ ಆಧಾರದ ಮೇಲೆ ನೌಕರಿಗಳನ್ನು ಅರಸಿ ಹೋಗುತ್ತಿದ್ದಾರೆ. ಹಾಗಾಗಿ ಅವರದ್ದೇ ಜಾತಿಯ ಗಂಡು-ಹೆಣ್ಣುಗಳ ಹುಡುಕಾಟ ನಿರರ್ಥಕ ಎಂಬುದು ತೇ-ೞರಿ ಬರುತ್ತದೆ. ಸಾಧ್ಯವಾದಷ್ಟು ನಮ್ಮ ಆಹಾರ, ಸಂಪ್ರದಾಯ, ಕುಟುಂಬದ ರೀತಿ ರಿವಾಜು, ಉಡುಗೆ ತೊಡುಗೆ ಎಲ್ಲವುಗಳಿವೆ ಹೊಂದಿಕೊಳ್ಳುವ ನಿಟ್ಟಿನಲ್ಲಿ ತಮ್ಮದೇ ಧರ್ಮದಲ್ಲಿ ವಧು-ವರರನ್ನು ಹುಡುಕುವ ಮಟ್ಟಿಗೆ ಸಮಾಜ ಬದಲಾಗಿದೆ. ವಿಶ್ವ ಕುಟುಂಬಿಯಾಗುವ ನಿಟ್ಟಿನಲ್ಲಿ ಮುಂದೆ ಸಾಗಿದೆ.

ಈ ಹಿಂದೆಯೂ ಕೂಡ ನಮ್ಮ ದೇಶದಲ್ಲಿ ರಾಜ ಮಹಾರಾಜರ ಕಾಲದಲ್ಲಿ ಅಂತರ್ಜಾತಿಯ, ಅಂತರ ಧರ್ಮೀಯ ವಿವಾಹಗಳು ಆಗಿಹೋಗಿವೆ. ಆದರೆ ಅವುಗಳು ಅಸ್ತಿತ್ವದಲ್ಲಿದ್ದರೂ ಕೂಡ ಕಟ್ಟುನಿಟ್ಟಾದ ನಿಯಮಗಳು ಹಾಗೂ ಸಾಮಾಜಿಕ ನಿರೀಕ್ಷೆಗಳ ಅಡಿಯಲ್ಲಿ ಇರುತ್ತಿದ್ದವು. ಅವುಗಳ ಬಗ್ಗೆ ನಮ್ಮ ಧಾರ್ಮಿಕ ಗ್ರಂಥಗಳ ಉಲ್ಲೇಖಗಳು ಇಂದಿನ ಆಧುನಿಕ ಕಾಲದ ಅಂತರ್ಧರ್ಮೀಯ ವಿವಾಹಗಳಿಗೆ ಭಿನ್ನವಾಗಿವೆ. ಆದರೆ ಇಂದು ಭಾರತೀಯ ದಂಡ ಸಂಹಿತೆಯು 1954ರಲ್ಲಿ ತಂದ ವಿಶೇಷ ವಿವಾಹ ಕಾಯ್ದೆಯು ಇಂತಹ ವಿವಾಹಗಳನ್ನು ಪ್ರೋತ್ಸಾಹಿಸುತ್ತಿದ್ದು ಅಂತಹ ವ್ಯಕ್ತಿಗಳಿಗೆ ಕಾನೂನಾತ್ಮಕ ರಕ್ಷಣೆ ಕೂಡ ದೊರೆಯುತ್ತದೆ. ಪ್ರಸ್ತುತ ಕರ್ನಾಟಕದಲ್ಲಿ ನಡೆಯುತ್ತಿರುವ ಮರ್ಯಾದೆಗೇಡು ಹತ್ಯೆಗಳನ್ನು ನೋಡಿದಾಗ ಪೂರ್ಣಚಂದ್ರ ತೇಜಸ್ವಿಯವರು ಹೇಳಿರುವ ಕೊಂದು ಉಳಿಸಿಕೊಳ್ಳಬೇಕಾದ ಧರ್ಮ ಯಾವುದು? ಎಂಬ ಮಾತು ನಮ್ಮನ್ನು ಒತ್ತಿ ತಿವಿಯುತ್ತಿದೆ.

ನಮ್ಮ ಮಕ್ಕಳಿಗೆ ನಾವು ನಮ್ಮ ಪ್ರೀತಿಯನ್ನು ಕೊಡಬಹುದೇ ಹೊರತು ನಮ್ಮ ಯೋಚನೆಗಳನ್ನಲ್ಲ ಅವರಿಗೆ ಅವರದ್ದೇ ಆದ ಯೋಚನೆಗಳು ಇರುತ್ತವೆ. ನಾವು ಅವರ ದೇಹಗಳಿಗೆ ಉಳಿದುಕೊಳ್ಳಲು ವಸತಿ ನೀಡಬಹುದೇ ಹೊರತು ಅವರ ಆತ್ಮಗಳಿಗಲ್ಲ. ಅವರ ಆತ್ಮಗಳಿಗೆ ಅವರದ್ದೇ ಆದ ನಾಳೆಯ ಮನೆಗಳಿವೆ. ಅವರ ಭವಿಷ್ಯದ ಮನೆಗಳನ್ನು ನಾವು ಕಾಣಲು ಕೂಡ ಸಾಧ್ಯವಿಲ್ಲ. ಇತ್ತೀಚೆಗೆ ನಡೆದ ಮರ್ಯಾದೆಗೇಡು ಹತ್ಯೆಯ ಪರಿಣಾಮವಾಗಿ ಮುಂದೆ ಇಂತಹ ಅನಾಹುತಗಳು ಆಗಬಾರದು ಎಂಬ ಕಾರಣಕ್ಕೆ ಬಿಗಿಯಾದ ಕಾನೂನು ಕ್ರಮಗಳನ್ನು ಕೈಗೊಳ್ಳಲು ಅವಶ್ಯಕವಾದ ನಿಯಮಗಳು ಇನ್ನೇನು ಹೊರಬೀಳಲಿವೆ ಎಂಬುದು ಸಮಾಧಾನದ ವಿಷಯ.

ಎಲ್ಲಾದರೂ ಇರಲಿ ಹೇಗಾದರೂ ಇರಲಿ ಅವರ ಪಾಡಿಗೆ ಅವರಿರಲಿ ಎಂಬ ಲೇಖನದ ಮೊದಲ ಭಾಗದಲ್ಲಿ ಬರುವ ತಾಯಿಯ ಮಾತುಗಳು ನಮ್ಮೆಲ್ಲರ ಎದೆಯಾಳದ ದನಿಯಾಗಿರಲಿ. ಸಾಮಾಜಿಕವಾಗಿ ಇದನ್ನು ಎಲ್ಲರೂ ಒಪ್ಪಬೇಕೆಂದಿಲ್ಲ... ಆದರೆ ವಿರೋಧಿಸುವ ಅವಶ್ಯಕತೆ ಅಷ್ಟಾಗಿಲ್ಲ.

ನಾವೆಲ್ಲಾ ಒಂದು ಎಂಬ ಮಾತು ಕೇವಲ ನಮ್ಮ ಗಂಟಲಿನಿಂದ ಬಂದರೆ ಸಾಲದು, ಎದೆಯಾಳದ ದನಿಯಾಗಬೇಕು. ವಿಕಾಸದ ಹಾದಿಯಲ್ಲಿ ಮಂಗನಿಂದ ಮಾನವನಾದ. ಮಾನವ ದೇವರಾಗಬೇಕೇ ಹೊರತು ಮೃಗವಾಗಬಾರದು.

ಹೊಡೆದಾಟ, ಕೊಲೆಯಂತಹ ವರ್ತನೆಗಳನ್ನು ತೋರಿ ಮೃಗವಾಗಬಾರದು. ಅಲ್ವೆ?

ಒಂದಾಗುವ ಮುಗ್ಧ ಯುವ ಜನಾಂಗವನ್ನು ಪ್ರೋತ್ಸಾಹಿಸದಿದ್ದರೂ ಬೇಡ, ಅವರನ್ನು ಅವರ ಪಾಡಿಗೆ ಬಿಟ್ಟುಬಿಡುವ ಮೂಲಕ ಒಂದು ಸಭ್ಯ, ಸಹಿಷ್ಣು ನಾಗರಿಕ ಸಮಾಜ ನಮ್ಮದಾಗಲಿ. ಅದುವೇ ಮನುಕುಲದ ಒಳಿತಿಗೆ ಹಾದಿಯಾಗಲಿ ಎಂದು ಆಶಿಸುವ...

- ವೀಣಾ ಹೇಮಂತ್‌ಗೌಡ ಪಾಟೀಲ್.
ಮುಂಡರಗಿ-ಗದಗ.

### 'ಮಕ್ಕಳ ಸಂಗಮ-2026' ಕಾರ್ಯಕ್ರಮದಲ್ಲಿ ಶ್ರೀ ಷ.ಭ್ರ. ಫಕ್ಕೀರೇಶ್ವರ ಶಿವಾಚಾರ್ಯ ಸ್ವಾಮಿಗಳು

# ಪರಿಸರ ಜಾಗೃತಿಗೆ ಪಣ ತೊಡಿ



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಮಾತನಾಡಿ, ಗುರಿ ಸಾಧಿಸಲು ಛಲವೀರಬೇಕು. ಪ್ರಸ್ತುತ ದಿನಮಾನಗಳಲ್ಲಿ ವಿದ್ಯಾರ್ಥಿಗಳಿಗೆ ಸಾಕಷ್ಟು ಅವಕಾಶಗಳಿದ್ದು, ಪ್ರತಿಭೆಯ ಮೂಲಕ ಒಂದಿಲ್ಲೊಂದು ರಂಗದಲ್ಲಿ ಸಾಧನೆ ಮಾಡಿ ಹುಟ್ಟಿದ ಊರಿಗೆ ಕೀರ್ತಿ ತರಬೇಕೆಂದರು.

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ. ಮನೆಗೊಂದ ಮರ, ಊರಿಗೊಂದು ವನವಿರಬೇಕು. ಪ್ರತಿಯೊಬ್ಬರೂ ಗಿಡಗಳನ್ನು ನೆಡುವುದರ ಮೂಲಕ ಪರಿಸರ ಜಾಗೃತಿಗೆ ಪಣ ತೊಡಬೇಕಿದೆ ಎಂದು ಪೂಜ್ಯ ಶ್ರೀ ಷ.ಭ್ರ. ಫಕ್ಕೀರೇಶ್ವರ ಶಿವಾಚಾರ್ಯ ಸ್ವಾಮಿಗಳು ಹೇಳಿದರು.

ಭಾಗ್ಯಶ್ರೀ ವಿವಿಧೋದ್ದೇಶಗಳ ಸೇವಾ ಸಂಸ್ಥೆ ಜಂತಲಿ-ಶಿರೂರು ಇವರು ಗದುಗಿನ ಎಮ್. ಎಸ್. ಹುಲ್ಲೂರು-ಎ1 ಹಾಗೂ ಹೈಟೆಕ್ ಕೋಚಿಂಗ್ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಪೂಜ್ಯ ಶ್ರೀ ಸಿದ್ಧೇಶ್ವರ ಶ್ರೀಗಳ ಪುಣ್ಯಸ್ಮರಣೆ ಮತ್ತು ಪುಟ್ಟರಾಜ ಗ.ಹಳ್ಳಿಕೇರಿಮಠ ಅವರ ದ್ವಿತೀಯ ವರ್ಷದ ಜನ್ಮದಿನದ ಅಂಗವಾಗಿ ನಡೆದ 'ಮಕ್ಕಳ ಸಂಗಮ-2026' ಪರಿಸರ ಜಾಗೃತಿ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡುತ್ತಿದ್ದರು.

ಕಾರ್ಯಕ್ರಮ ಉದ್ಘಾಟಿಸಿದ ಗದಗ ತೋಟಗಾರಿಕೆ ಇಲಾಖೆಯ ವಿಶ್ರಾಂತ ಹಿರಿಯ ಸಹಾಯಕ ನಿರ್ದೇಶಕ ಸುರೇಶ ಕುಂಬಾರ ಮಾತನಾಡಿ, ವಿನಾಕಾರಣ ನೀರನ್ನು ವ್ಯಯ ಮಾಡಬಾರದು. ಜಲ ಸಂಪತ್ತಿನಿಂದಲೇ ಸಕಲ ಚರಾಚರಗಳು ಎನ್ನುವದನ್ನು ನಾವೆಲ್ಲರೂ ಅರಿಯಬೇಕಿದೆ. ಕೃಷಿ ಕಾಯಕದಲ್ಲಿ ಪ್ರತಿಯೊಬ್ಬರೂ ತೊಡಗಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮುಂಡರಗಿಯ ವಲಯ ಅರಣ್ಯ ಅಧಿಕಾರಿ ಮಂಜುನಾಥ ಮೇಗಲಮನಿ ಹಾಗೂ ಶಿರಹಟ್ಟಿ ವಲಯ ಅರಣ್ಯಾಧಿಕಾರಿ ರಾಮಪ್ಪ ಪೂಜಾರ ಕಪ್ಪತ್ತಗುಡ್ಡದ ಮಹತ್ವ ಮತ್ತು ಪರಿಸರ ಸಂರಕ್ಷಣೆಯ ಕುರಿತು ವಿಷಯಗಳನ್ನು ಹಂಚಿಕೊಂಡರು.

ಕನ್ನಡ ಸಾಹಿತ್ಯ ಪರಿಷತ್ತಿನ ಗದಗ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಯಾವುದೇ ಆಚರಣೆಗಳು ಕೇವಲ ರಂಜನೆಗೆ ಸೀಮಿತವಾಗಬಾರದು. ನಿರ್ದಿಷ್ಟ ಉದ್ದೇಶ, ಸಮಾಜಿಕ ಕಳಕಳಿಯ ಕಾರ್ಯವಿರಬೇಕು. ಅಂದಾಗ ಆಚರಣೆಗೆ ಮಹತ್ವ ಬರುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನವೋದಯ ತರಬೇತುದಾರರ ಸಂಘದ ಗದಗ ಜಿಲ್ಲಾ ಗೌರವ ಅಧ್ಯಕ್ಷ ಎಮ್. ಎಸ್. ಹುಲ್ಲೂರು ಮಾತನಾಡಿ, ಎಲ್ಲರಲ್ಲಿಯೂ ಒಂದಿಲ್ಲೊಂದು ಪ್ರತಿಭೆ ಇರುತ್ತದೆ. ಸಾಧನೆ ಮಾಡಲು ಬಡತನ ಅಡ್ಡಿ ಬರುವದಿಲ್ಲ ಎಂಬುದನ್ನು ವಿದ್ಯಾರ್ಥಿಗಳು ಅರಿಯಬೇಕಿದೆ ಎಂದರು.

ಎಮ್.ಎಸ್. ಹುಲ್ಲೂರು ಅವರ ಸ್ಪರ್ಧಾತ್ಮಕ ಪುಸ್ತಕಗಳನ್ನು ಲೋಕಾರ್ಪಣೆಗೊಳಿಸಲಾಯಿತು. ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಗುಳ್ಳಯ್ಯ ಬಿ.ಮಾಲಗಿತ್ತಿಮಠ, ಬಾಲಪ್ರತಿಭೆ ವೈಧೃತಿ ಕೋರಿಶೆಟ್ಟರ, ಕಪ್ಪತ್ತಗುಡ್ಡ ಸಂರಕ್ಷಣಾ ವೇದಿಕೆಯ ಭರಮಪ್ಪ ಕಿಲ್ಲಾರಿ, ಗದಗ ಜಿಲ್ಲಾ ನವೋದಯ ತರಬೇತುದಾರರ ಸಂಘದ ಜಂಟಿ ಮಾಧ್ಯಮ ಸಲಹೆಗಾರರಾದ ಅಮರೇಶ ಬನ್ನಿಕೊಪ್ಪ, ಸಹಕಾರ್ಯದರ್ಶಿ ವೀರೇಶ ಅಣ್ಣಿಗೇರಿ, ಕಾರ್ಮಿಕ ಸಂಘಟನೆಯ ಈಶ್ವರ ಲಕ್ಷ್ಮೇಶ್ವರ, ಕರ್ನಾಟಕ ರಕ್ಷಣಾ ವೇದಿಕೆಯ ನಿಂಗನಗೌಡ ಎಸ್. ಮಾಲಿಪಾಟೀಲ, ಕವಿ ಬಸವರಾಜ ನೆಲಜೇರಿ, ಚಿಂತಕಿ ನಿರ್ಮಲಾ ಪಾಟೀಲ, ಕೃಷ್ಣಾ ಜಾಧವ್, ರಫೀಕ್ ಕುಂದಗೋಳ ಮುಂತಾದವರು ಪಾಲ್ಗೊಂಡಿದ್ದರು.

ಸುಧಾ ಗು.ಪಾಟೀಲ ಹಾಗೂ ಸಂಗಡಿಗರಿಂದ ಯೋಗ ಪ್ರದರ್ಶನ ಜರುಗಿತು. ದಿವ್ಯಾ ಹಾಗೂ ಸಂಗಡಿಗರು ಪ್ರಾರ್ಥನಾ ಗೀತೆ ಹಾಡಿದರು. ಅಮರೇಶ ಮಲ್ಲನಗೌಡ್ರು ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಸಿದ್ದೇಶ್ವರ ಶ್ರೀಗಳು ಆಧ್ಯಾತ್ಮದ ಮೇರು ಶಿಖರ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜನರಲ್ಲಿ ಜಾತಿ-ಬೇಧ ಮರೆಸಿ, ಶಾಂತಿ, ಪ್ರೇಮ, ಜ್ಞಾನ, ನಡೆ-ನುಡಿ ಹೇಗಿರಬೇಕೆಂಬುದನ್ನು ತಿಳಿಸಿದ, ನುಡಿದಂತೆ ನಡೆದ ಸಂತರಾದ ಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳ ವಿಚಾರ-ಚಿಂತನೆಗಳು ನಾಗರಿಕ ಸಮಾಜಕ್ಕೆ ಸಂಜೀವಿನಿಯಾಗಿವೆ ಎಂದು ಎಂ.ಎ. ಕಾಲೇಜಿನ ಉಪನ್ಯಾಸಕ ಎಫ್.ಎಂ. ಚಕಾರದ ಹೇಳಿದರು.

ಅವರು ಪಟ್ಟಣದ ಸೋಮೇಶ್ವರ ದೇವಸ್ಥಾನ ಪ್ರಾಂಗಣದಲ್ಲಿ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ವತಿಯಿಂದ ಪುಲಿಗೆರೆ ಪೌರ್ಣಿಮೆ ಕಾರ್ಯಕ್ರಮದ 34ನೇ ಸಂಚಿಕೆಯಲ್ಲಿ 'ಆಧ್ಯಾತ್ಮಿಕ ಮೇರು ಶಿಖರ ಶ್ರೀ ಸಿದ್ದೇಶ್ವರ ಸ್ವಾಮಿಗಳು' ಎಂಬ ವಿಷಯದ ಕುರಿತು ಉಪನ್ಯಾಸಕ ನೀಡಿದರು.

ವಿಶ್ವಮಾನ್ಯರಾದ ಅವರು ಚಿರಸ್ಮರಣೀಯರು ಮತ್ತು ಅವರು ನೆನೆದರೆ ಮಾತು ಮೌನ-ಬುದ್ಧಿ ಶೂನ್ಯವಾಗುತ್ತದೆ. ಅವರೇ ಹೇಳುವಂತೆ ಯಾವುದೂ ಶಾಶ್ವತವಲ್ಲ ಎಂಬ ಮಾತು ವೇದವಾಕ್ಯದಂತಾಗಿದ್ದರೂ ಅವರ ಜ್ಞಾನಾಮೃತವಿಲ್ಲದೇ ನಾಡಿನ ಆಧ್ಯಾತ್ಮಿಕ ಸಂಪತ್ತಿಗೆ ತುಂಬಲಾರದ ನಷ್ಟವಾಗಿದೆ. ದೇವಮಾನವರೇ ಆಗಿದ್ದ ಅವರ ವಿಚಾರ-ಚಿಂತನೆಗಳು ಸದಾ ಶಾಶ್ವತ. ಅವುಗಳೇ ನಾಡಿನ ಜನತೆಗೆ ಸಂಜೀವಿನಿಯಾಗಿವೆ.

ಅವರನ್ನು ಸದಾ ನೆನೆಯುತ್ತ ಅವರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ನಡೆದು ಅವುಗಳನ್ನು ಸಮಾಜದಲ್ಲಿ ಜಾರಿಗೆ ತರುವ ಪ್ರಯತ್ನ ಮಾಡೋಣ ಎಂದರು. ಕಾರ್ಯಕ್ರಮ ಉದ್ಘಾಟಿಸಿದ ಪತ್ರಕರ್ತರ ಸಂಘದ ಅಧ್ಯಕ್ಷ ಅಶೋಕ ಸೊರಟೂರ, ಸೋಮೇಶ್ವರ ದೇವಸ್ಥಾನದ ಅರ್ಚಕರ ಸಂಘದ ಅಧ್ಯಕ್ಷ ಡಿ.ಎಂ. ಪೂಜಾರ, ಶಿವಲಿಂಗಯ್ಯ ಹೊತಗಿಮಠ, ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲ ಕುಲಕರ್ಣಿ ಮಾತನಾಡಿದರು.

ಈ ವೇಳೆ ಹಿರಿಯರಾದ ಚಂಬಣ್ಣ ಬಾಳಿಕಾಯಿ, ಪೂರ್ಣಾಜಿ ಕರಾಟೆ, ವಿರೂಪಾಕ್ಷಪ್ಪ ಪಡಗೇರಿ, ಈಶ್ವರ ಮೆಡ್ಲೇರಿ, ಸುರೇಶ ರಾಚನಾಯ್ಕರ, ಸಿದ್ದನಗೌಡ ಬಳ್ಳೊಳ್ಳಿ, ನೀಲಪ್ಪ ಕರ್ಜಕಣ್ಣನವರ, ನಿಂಗಪ್ಪ ತಹಸೀಲ್ದಾರ, ನಿಂಗಪ್ಪ ಗೊರವರ, ಎನ್.ಆರ್. ಸಾತಪುತೆ, ಜಯಣ್ಣ ಹೊಟ್ಟಿ, ಜಿ.ಎಸ್. ಗುಡಗೇರಿ, ಲೋಕೇಶ ಸುತಾರ, ಚಂದ್ರು ಹಂಪಣ್ಣವರ, ದೇವಸ್ಥಾನ ಅರ್ಚಕ ಸಮೀರ ಪೂಜಾರ, ಶೈಲಾ ಆದಿ ಮುಂತಾದವರಿದ್ದರು. ನಾಗರಾಜ ಕಳಸಾಪುರ ನಿರೂಪಿಸಿದರು.

# ಆಕ್ಷೇಪಣೆಗೆ ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನರೇಗಲ್ಲ ಪಟ್ಟಣದ ಸಾರ್ವಜನಿಕರಿಗೆ ತಿಳಿಸುವುದೆನೆಂದರೆ, ನರೇಗಲ್ ಪಟ್ಟಣ ಪಂಚಾಯತ್ ಕಾರ್ಯಾಲಯದ ವ್ಯಾಪ್ತಿಯಲ್ಲಿ ದ್ಯಾಂಪುರ ಗ್ರಾಮದ ಆಶ್ರಯ ಬಡಾವಣೆಯಲ್ಲಿ ರಿ.ಸ.ನಂ 714-718 ರಲ್ಲಿನ ನಾಗರಿಕ ಸೌಲಭ್ಯಕ್ಕೆ ಮೀಸಲು ಇರುವ ಆಸ್ತಿ ನಂ 349 ಪ್ಲಾಟ ನಂ 168 ರ ಒಟ್ಟು ವಿಸ್ತೀರ್ಣ 3604 ಚದರ ಮೀಟರ ಜಾಗೆಯನ್ನು ಡಾ. ಬಿ ಆರ್ ಅಂಬೇಡ್ಕರ್ ಭವನದ ಕಟ್ಟಡ ನಿರ್ಮಿಸಲು ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ರೋಣ ಅವರು ನಿವೇಶನ ಮಂಜೂರಾತಿಗಾಗಿ ಮನವಿಯನ್ನು ಸಲ್ಲಿಸಿದ್ದು ಇರುತ್ತದೆ.

ಈ ನಿವೇಶನವನ್ನು ಮಂಜೂರಿಸುವ ಸಲುವಾಗಿ ವ್ಯಾಪ್ತಿಯಲ್ಲಿನ ಸಾರ್ವಜನಿಕರು ಈ ಬಗ್ಗೆ ಆಕ್ಷೇಪಣೆ, ಸಲಹೆ ಸೂಚನೆಗಳು ಇದ್ದಲ್ಲಿ ಈ ಪ್ರಕಟಣೆ ನಂತರ 15 ದಿನಗಳ ಒಳಗಾಗಿ ನರೇಗಲ್ ಪಟ್ಟಣ ಪಂಚಾಯತ್ ಕಾರ್ಯಾಲಯದ ಈ ಕಾರ್ಯಾಲಯಕ್ಕೆ ಲಿಖಿತವಾಗಿ ಸ್ಪಷ್ಟ ಕಾರಣಗಳೊಂದಿಗೆ ಸಲಹೆ/ಸೂಚನೆ/ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ.

ಅವಧಿ ಮೀರಿ ಸಲ್ಲಿಸುವ ಸಲಹೆ/ಸೂಚನೆ/ಆಕ್ಷೇಪಣೆಗಳನ್ನು ಪರಿಗಣಿಸಲು ಅವಕಾಶವಿರುವುದಿಲ್ಲ ಎಂದು ನರೇಗಲ್ ಪಟ್ಟಣ ಪಂಚಾಯತ್ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಪುಸ್ತಕಗಳ ಆಯ್ಕೆಗಾಗಿ ನೋಂದಣಿ ಮಾಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಪುಸ್ತಕಗಳ ನೋಂದಣಿ ಕಾಯ್ದೆ ಅನ್ವಯ, ಪ್ರಕಾಶಕರು 2025ರಲ್ಲಿ ಮುದ್ರಿಸಿ ಪ್ರಕಟಿಸಿದ ಮೊದಲ ಆವೃತ್ತಿಯ ಪುಸ್ತಕಗಳ 3 ಪ್ರತಿಗಳನ್ನು ರಾಜ್ಯ ಕೇಂದ್ರ ಗ್ರಂಥಾಲಯ ಕಬ್ಬನ್ ಪಾರ್ಕ್, ಬೆಂಗಳೂರು ಇಲ್ಲಿಗೆ ಸಲ್ಲಿಸಬೇಕು. ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯು ಆಯ್ಕೆಗಾಗಿ ಸಲ್ಲಿಸಲಾದ 3 ಪ್ರತಿಗಳಲ್ಲಿ ಒಂದನ್ನು ಪರಿಗಣಿಸಲಾಗುತ್ತದೆ.

2025ರಲ್ಲಿ ರಾಜ್ಯದಲ್ಲಿ ಪ್ರಥಮ ಮುದ್ರಣಗೊಂಡು ಪ್ರಕಟಗೊಳ್ಳುವ ಯಾವುದೇ ಭಾಷೆಯ ಪುಸ್ತಕಗಳನ್ನು ರಾಜ್ಯ ಕೇಂದ್ರ ಗ್ರಂಥಾಲಯದಲ್ಲಿ ಪ್ರತಿ ಶೀರ್ಷಿಕೆ ಮೂರು ಪ್ರತಿಗಳನ್ನು ಮುಫತ್ತಾಗಿ ಸಲ್ಲಿಸಿ ಜನೆವರಿ 31ರ ಸಂಜೆ 5.30ರೊಳಗಾಗಿ ನೋಂದಣಿ ಮಾಡಿಸತಕ್ಕದ್ದು. ನೋಂದಣಿಯಾದ ಪುಸ್ತಕಗಳನ್ನು ಮಾತ್ರ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಪರಿಗಣಿಸಲಾಗುವುದು. ಅಂತಿಮ ದಿನಾಂಕದ ನಂತರ ನೋಂದಣಿಯಾಗುವ ಪುಸ್ತಕಗಳನ್ನು ಆಯ್ಕೆಗಾಗಿ ಪರಿಗಣಿಸಲಾಗುವುದಿಲ್ಲ.

ಹೊರ ರಾಜ್ಯಗಳಲ್ಲಿ 2025ರಲ್ಲಿ ಪ್ರಥಮ ಮುದ್ರಣಗೊಂಡು ಪ್ರಕಟವಾಗುವ ಆಂಗ್ಲ, ಹಿಂದಿ ಅಥವಾ ಯಾವುದೇ ಭಾಷೆಯ ಪುಸ್ತಕಗಳನ್ನು ಆಯಾ ರಾಜ್ಯ ಕೇಂದ್ರ ಗ್ರಂಥಾಲಯಗಳಲ್ಲಿ ಅಥವಾ ಕೇಂದ್ರ /ಆಯಾ ರಾಜ್ಯ ಸರ್ಕಾರಗಳಿಂದ ಅಧಿಸೂಚಿಸಲ್ಪಟ್ಟ ಅಧಿಕೃತ ಪುಸ್ತಕ ನೋಂದಣಿ ಕೇಂದ್ರಗಳಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಸಿ, ನೋಂದಣಿ ಪ್ರಮಾಣಪತ್ರದ ನಕಲು ಪ್ರತಿಯೊಂದಿಗೆ ಮತ್ತು ಸದರಿ ಪುಸ್ತಕದ ಒಂದು ಪ್ರತಿಯನ್ನು ಜನವರಿ 31ರ ಸಂಜೆ 5.30ರೊಳಗಾಗಿ ಆಯ್ಕೆಯಾಗಿ ರಾಜ್ಯ ಕೇಂದ್ರ ಗ್ರಂಥಾಲಯಕ್ಕೆ ಸಲ್ಲಿಸತಕ್ಕದ್ದು.

ಸಾಹಿತ್ಯ,ಮಕ್ಕಳ ಸಾಹಿತ್ಯ, ಕಲೆ, ಮತ್ತು ವಿಜ್ಞಾನ ಪ್ರಕಾರಗಳ ಯಾವುದೇ ಭಾಷೆಯ ಪುಸ್ತಕಗಳನ್ನು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಸಲ್ಲಿಸಬಹುದು. ಆಯ್ಕೆ ಸಮಿತಿಯು ನಿರ್ಧರಿಸುವ ಮಾನದಂಡದ ಪ್ರಕಾರ ಬೆಲೆ ನಿಗದಿಪಡಿಸಿ ಆಯ್ಕೆ ಮಾಡುವ ಹಕ್ಕು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಇರುತ್ತದೆ. ಪುಸ್ತಕಗಳ ಆಯ್ಕೆ ಹಾಗೂ ಅವುಗಳ ಬೆಲೆ ನಿಗದಿ ವಿಷಯದಲ್ಲಿ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಆಯುಕ್ತರ ಕಛೇರಿ ದೂರವಾಣಿ ಸಂಖ್ಯೆ-080-22864990, 22867358 ಮತ್ತು ರಾಜ್ಯ ಕೇಂದ್ರ ಗ್ರಂಥಾಲಯದ ದೂರವಾಣಿ ಸಂಖ್ಯೆ-080-22212128 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ವೆಂಕಟೇಶ್ವರಿ ಜಿ.ಎಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2025ನೇ ಸಾಲಿನಲ್ಲಿ ಪ್ರಕಟಗೊಂಡ ಪುಸ್ತಕಗಳ ಆಯ್ಕೆಗೆ ಪ್ರತ್ಯೇಕವಾಗಿ ಆಯುಕ್ತರ ಕಛೇರಿಯಲ್ಲಿ ಯಾವುದೇ ಪುಸ್ತಕಗಳನ್ನು ಸ್ವೀಕರಿಸಲಾಗುವುದಿಲ್ಲ. ಆಯ್ಕೆ ಸಮಿತಿಗೆ ಆಯ್ಕೆಗಾಗಿ ಪುಸ್ತಕಗಳನ್ನು ಸಲ್ಲಿಸಲು ಇಚ್ಛಿಸುವ ಲೇಖಕರು, ಲೇಖಕ-ಪ್ರಕಾಶಕರು ಮತ್ತು ಪ್ರಕಟಣಾ ಸಂಸ್ಥೆಯವರು ನಿಗದಿತ ಅವಧಿಯೊಳಗೆ ರಾಜ್ಯ ಕೇಂದ್ರ ಗ್ರಂಥಾಲಯದಲ್ಲಿ ಪುಸ್ತಕಗಳ ನೋಂದಣಿ ಅಧಿನಿಯಮದಡಿ ನಿಯಮಾನುಸಾರ ಪುಸ್ತಕಗಳನ್ನು ಸಲ್ಲಿಸತಕ್ಕದ್ದು. ನೊಂದಣಿಗಾಗಿ ನಿಗದಿತ ಅರ್ಜಿ ನಮೂನೆ ಹಾಗೂ ಮಾಹಿತಿಗಾಗಿ ಇಲಾಖಾ ಅಂತರ್ಜಾಲ dpl.karnataka.gov.in ಮತ್ತು ರಾಜ್ಯದ ಎಲ್ಲಾ ಜಿಲ್ಲಾ/ನಗರ ಕೇಂದ್ರ ಗ್ರಂಥಾಲಯಗಳ ಉಪನಿರ್ದೇಶಕರು/ಮುಖ್ಯ ಗ್ರಂಥಾಲಯಾಧಿಕಾರಿಗಳ ಕಛೇರಿಗಳಲ್ಲಿ ಪಡೆಯಬಹುದು.

# ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಪ್ರಥಮ



■ವಿಜಯಸಾಕ್ಷಿ ಸುದ್ದಿ, ಗದಗ

ಕೆ.ಹೆಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ 2025–26ನೇ ಸಾಲಿನ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಮುಂಡರಗಿ ನ್ಯಾಯಾಲಯದ ಶಿರಸ್ತೇದಾರ ಹಾಗೂ ನ್ಯಾಯಾಂಗ ಇಲಾಖೆ ನೌಕರರ ಪತ್ತಿನ ಸಹಕಾರಿ ಸಂಘದ ನಿರ್ದೇಶಕಿ ಶಹನಾಜ ಆಯ್.ತೆಗ್ಗಿನಮನಿ ಇವರು ಟೇಬಲ್ ಟೆನ್ನಿಸ್ 45 ವರ್ಷ ಮೇಲ್ಪಟ್ಟ ಮಹಿಳೆಯರ ಸಿಂಗಲ್ಸ್, ಷಟಲ್ ಬ್ಯಾಡ್ಮಿಂಟನ್ 45 ವರ್ಷ ಮೇಲ್ಪಟ್ಟ ಮಹಿಳೆಯರ ಸಿಂಗಲ್ಸ್, 76 ಕೆಜಿ ಮಹಿಳೆಯರ ಕುಸ್ತಿ ಪಂದ್ಯ ಹಾಗೂ ಷಟಲ್ ಬ್ಯಾಡ್ಮಿಂಟನ್ 45 ವರ್ಷ ಮೇಲ್ಪಟ್ಟ ಮಹಿಳೆಯರ ಡಬಲ್ಸ್‌ನಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಇವರ ಸಾಧನೆಗೆ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ, ಮಾಜಿ ರಾಜ್ಯ ಉಪಾಧ್ಯಕ್ಷ ರವಿ ಎಲ್. ಗುಂಜೀಕರ್, ಪದಾಧಿಕಾರಿಗಳಾದ ಮಲ್ಲಿಕಾರ್ಜುನ ಹೊಸೂರ, ಎಸ್.ಡಿ. ತಳವಾರ, ನ್ಯಾಯಾಂಗ ಇಲಾಖೆಯ ಅಧಿಕಾರಿಗಳು ನೌಕರರು ಮತ್ತು ಹಿರಿಯ ಸಾಹಿತಿ, ಪ್ರಕಾಶಕ ಎ.ಎಸ್. ಮಕಾನದಾರ ಅಭಿನಂದನೆ ತಿಳಿಸಿದ್ದಾರೆ.

ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳವರ ಬೆಳ್ಳಿ ಮಂಗಲ ಮೂರ್ತಿ ಮೆರವಣಿಗೆ ಇಂದು

# ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಪಾದಯಾತ್ರೆ

■ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ

ಬುಕ್ಕಾಂಬುಧಿ ಗ್ರಾಮದ ಪಂಪಾ ವಿರೂಪಾಕ್ಷೇಶ್ವರ ದೇವಸ್ಥಾನದಿಂದ ಬೆಟ್ಟದವರೆಗೆ ಜನವರಿ 6ರಂದು ಸಂಜೆ 5 ಗಂಟೆಗೆ ಯುಗಪುರುಷ, ಪರಮ ತಪಸ್ವಿ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳವರ ಬೆಳ್ಳಿ ಮಂಗಲ ಮೂರ್ತಿ ಹಾಗೂ ಭಾವಚಿತ್ರದ ಮೆರವಣಿಗೆಯನ್ನು ಸಂಯೋಜಿಸಲಾಗಿದೆ ಎಂದು ಶ್ರೀಮದ್ ಉಜ್ಜಯಿನಿ ಜಗದ್ಗುರು ಸಿದ್ಧಲಿಂಗ ಶಿವಾಚಾರ್ಯ ಟ್ರಸ್ಟಿನ ಅಧ್ಯಕ್ಷರಾದ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಿಳಿಸಿದ್ದಾರೆ.

ಪ್ರತಿ ವರ್ಷದಂತೆ ಈ ವರ್ಷ ಜನವರಿ 7ರಂದು ಪರಮ ತಪಸ್ವಿ ಲಿಂ. ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳ ಲಿಂಗಾಂಗ ಸಾಮರಸ್ಯದ 90ನೇ ವರ್ಷದ ಪುಣ್ಯ ಸ್ಮರಣೋತ್ಸವ ಹಾಗೂ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳವರ 70ನೇ ಜನ್ಮ ವರ್ಧಂತಿ ಮಹೋತ್ಸವದ ಅಂಗವಾಗಿ ಹಲವಾರು ವೈವಿಧ್ಯಮಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.



ವ್ಯಸನಮುಕ್ತ ಸಮಾಜ ನಿರ್ಮಾಣಕ್ಕಾಗಿ ಜನರಲ್ಲಿ ಜಾಗೃತಿ ಮತ್ತು ಧರ್ಮ ಪ್ರಜ್ಞೆ ಮೂಡಿಸಬೇಕೆಂಬ ಸತ್ಯ ಸಂಕಲ್ಪದಿಂದ ಶ್ರೀ ರಂಭಾಪುರಿ, ಶ್ರೀ ಉಜ್ಜಯಿನಿ ಮತ್ತು ಶ್ರೀ ಕಾಶೀ ಜಗದ್ಗುರುಗಳವರು ಮೆರವಣಿಗೆಯೊಂದಿಗೆ ಪಾದಯಾತ್ರೆ ಕೈಗೊಳ್ಳಲಿದ್ದಾರೆಂದು ಶ್ರೀ ರಂಭಾಪುರಿ ಜಗದ್ಗುರುಗಳು ಮಾಹಿತಿ ನೀಡಿದ್ದಾರೆ. ಜಗದ್ಗುರುಗಳೊಂದಿಗೆ ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆ ಅಧ್ಯಕ್ಷರಾದ ಡಾ. ಪ್ರಭು ಸಾರಂಗದೇವ ಶಿವಾಚಾರ್ಯರು, ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯರು, ಹುಲಿಕೆರೆ ದೊಡ್ಡಮಠದ ವಿರೂಪಾಕ್ಷಲಿಂಗ ಶಿವಾಚಾರ್ಯರು, ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರನ್ನು ಮೊದಲ್ಗೊಂಡು ಸುಮಾರು 50ಕ್ಕೂ ಹೆಚ್ಚು ಶಿವಾಚಾರ್ಯರು ಪಾದಯಾತ್ರೆಯಲ್ಲಿ ಪಾಲ್ಗೊಳ್ಳಲಿದ್ದಾರೆಂದು ಅವರು ತಿಳಿಸಿದ್ದಾರೆ.

5 ದಿನಗಳ ಕಾಲ ಬುಕ್ಕಾಂಬುಧಿಯಲ್ಲಿ ಜನ ಜಾಗೃತಿ ಧರ್ಮ ಸಮಾರಂಭ ನಡೆಸಿದ ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ತಮ್ಮ ಹೇಳಿಕೆಯಲ್ಲಿ, ಪರಮ ತಪಸ್ವಿ ಲಿಂ.ಶ್ರೀ ಉಜ್ಜಯಿನಿ ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರ 90ನೇ ವರ್ಷದ ಪುಣ್ಯ ಸ್ಮರಣೋತ್ಸವ ಹಾಗೂ ಜನವರಿ 7ರಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು 70ನೇ ವರ್ಷದಲ್ಲಿ ಪಾದಾರ್ಪಣೆ ಮಾಡುತ್ತಿರುವ ಸಂದರ್ಭದಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಸಂಘಟಿಸಲಾಗಿದೆ ಎಂದು ತಿಳಿಸಿದ್ದಾರೆ.

ಈ ಅರ್ಥಪೂರ್ಣ ಅಪೂರ್ವ ಸಮಾರಂಭದಲ್ಲಿ ಎಲ್ಲೆಡೆಯಿಂದ ಧರ್ಮಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕು. ಆಗಮಿಸಿದ ಎಲ್ಲಾ ಸದ್ಭಕ್ತರಿಗೆ ಅನ್ನ ದಾಸೋಹ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಟ್ರಸ್ಟಿನ ಉಪಾಧ್ಯಕ್ಷ ಎಸ್.ಎಂ. ವೀರಭದ್ರಪ್ಪ ಮತ್ತು ಕಾರ್ಯದರ್ಶಿ ಹೆಚ್.ಪಿ. ಸುರೇಶ ತಿಳಿಸಿದ್ದಾರೆ.

# ಯುವಕರಿಗಾಗಿ ತಿಳುವಳಿಕೆ ಕಾರ್ಯಕ್ರಮ




■ವಿಜಯಸಾಕ್ಷಿ ಸುದ್ದಿ, ಗದಗ

ಸೋಲಿಡಾರಿಟಿ ಯೂತ್ ಮೂವಮೆಂಟ್ ಗದಗ ಜಿಲ್ಲಾ ಘಟಕದ ವತಿಯಿಂದ 'ಸಬಲ ಯುವಕರು–ಶುದ್ಧ ಮನಸ್ಸು, ಸುರಕ್ಷಿತ ಭವಿಷ್ಯ' ಎಂಬ ವಿಷಯದ ಕುರಿತು ಗದಗ ನಗರದ ಇಂದಿರಾ ವನದಲ್ಲಿ ತಿಳುವಳಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು

ಗದಗ ಡಿ.ವೈ.ಎಸ್.ಪಿ ಮಹಾಂತೇಶ್ ಸಜ್ಜನ ಸೈಬರ್ ವಂಚನೆಯ ವಿವಿಧ ವಿಧಾನಗಳನ್ನು ವಿವರಿಸಿ, ಅದರಿಂದ ತಪ್ಪಿಸಿಕೊಳ್ಳುವ ಕುರಿತು ಮಹತ್ವದ ಮಾಹಿತಿ ನೀಡಿದರು. ಮುಖ್ಯ ಅತಿಥಿಗಳಾದ ಖತೀಬ್ ವ ಇಮಾಮ ಜಮಾತ್ ಮಸ್ಜಿದ್ ಗದಗ ಮೌಲಾನಾ ಹುಸೇನ ಅಹ್ಮದ ಬಾಗಲಿ ಮಾದಕ ದ್ರವ್ಯ, ವ್ಯಸನಗಳಿಂದ ಉಂಟಾಗುವ ದೈಹಿಕ ಹಾಗೂ ಮಾನಸಿಕ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಿದರು. ನಗರಸಭೆ ಸದಸ್ಯ ಜೂನಸಾಬ ನಮಾಜಿ ಉತ್ತಮ ನಾಯಕತ್ವ, ವ್ಯಕ್ತಿತ್ವ ಮತ್ತು ಜೀವನ ಶೈಲಿಯಲ್ಲಿ ಮೌಲ್ಯಾಧಾರಿತ ಬದಲಾವಣೆಯ ಅಗತ್ಯತೆಯನ್ನು ತಿಳಿಸಿದರು.

ಮುಖಂಡರಾದ ಮುನ್ನಾ ರಶ್ಮಿ, ಮುಲ್ಲಾ ಜಿಲ್ಲಾಧ್ಯಕ್ಷ ಮುಹಮ್ಮದ್ ಯೂಸುಫ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಮ್ಮದ ಮನ್ನಾನ ಕುರಾನ್ ಪಠಣ ನೆರವೇರಿಸಿದರು.

ಹಿದಾಯತ್ & ಜೆ.ಯು ಸ್ಕೂಲ್ ಅಧ್ಯಕ್ಷ ಜುನೆದ್ ಉಮಚಗಿ, ಮಹಮ್ಮದ್ ರಿಯಾಜ್ ಶೇಖ್, ಕಾರ್ಯಕರ್ತರಾದ ಅಬ್ದುಲ್ ಹಫೀಜ್ ಉಮಚಗಿ, ಮುನ್ನಾ ಕಲ್ಮನಿ, ಆಕ್ತರ್‌ಅಲಿ ಅತ್ತಾರ, ಜಹೀರ್ ಅಹ್ಮದ್ ಔಸಂಗವಾಲೆ, ಜಾವೀದ ಉಮಚಗಿ, ಖಾಸಿಂ ದರ್ಗದ್, ಮೆಹಬೂಬ್ ಅಲಿ ರೋಣ, ಮುಹಮ್ಮದ್ ಫಹಿಮ್, ಸಮೀರ್ ಅಕ್ಕಿ, ವಸೀಮ್ ಅಹ್ಮದ್, ಪುರಖಾನ ಉಮಚಗಿ, ಸಾಧಿಕ್ ಧಾರವಾಡ ಹಾಗೂ ಸಂಘದ ಎಲ್ಲಾ ಕಾರ್ಯಕರ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಬಸವ ಯೋಗ ಮಂದಿರದಲ್ಲಿ ಹರ್ಷೋತ್ಸವ–2026

# ಕಾಯಕದಲ್ಲಿ ನಿರತರಾದರೆ ಸದಾ ಹರುಷದಿಂದಿರಲು ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಗದಗ

'ಹರುಷ'ವು ಬಾಯಿ ಮಾತಿನಲ್ಲಿ ಇರುವುದಿಲ್ಲ, ಕಾಯಕದಲ್ಲಿರುವುದು. ನಾವು ಯಾವುದೇ ಕಾಯಕವನ್ನು ಶ್ರದ್ಧೆ, ನಿಷ್ಠೆ, ವಿಶ್ವಾಸ, ಭಕ್ತಿ, ಭಾವಗಳಿಂದ ಮಾಡಿದಾಗ ಅದರಿಂದ ದೊರೆಯುವ ಪ್ರತಿಫಲವು ನಮಗೆ ಸುಖ, ಸಂತೋಷ, ತೃಪ್ತಿ ತರುವುದು. ಕಾಯಕ ಮಾಡದೇ ಅನಾಯಸವಾಗಿ ದೊರೆತ ಪ್ರತಿಫಲ ನಮಗೆ ದುಃಖವನ್ನುಂಟು ಮಾಡುವುದು. ಆದ್ದರಿಂದ ನಮ್ಮ ನಮ್ಮ ಶಕ್ತಿ–ಸಾಮರ್ಥ್ಯಕ್ಕನುಗುಣವಾಗಿ ನಿತ್ಯ ನಿರಂತರ ಕಾಯಕದಲ್ಲಿ ನಿರತರಾದರೆ ನಾವು ನಮ್ಮ ಬದುಕಿನಲ್ಲಿ ಸದಾ ಹರುಷದಿಂದಿರಲು ಸಾಧ್ಯವಾಗುವದೆಂದು ಅಬ್ಬಿಗೇರಿಯ ಆದರ್ಶ ಕೃಷಿ–ಋಷಿಗಳಾದ ಶರಣ ಅಜ್ಜಣ್ಣ ಶಿವಶಿಂಪರ ಅಭಿಪ್ರಾಯಪಟ್ಟರು.

ಎಸ್.ವಾಯ್.ಬಿ.ಎಂ.ಎಸ್ ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ಇವರು ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನೂತನ ಕ್ಯಾಲೆಂಡರ್ ವರ್ಷಾಚರಣೆ ಪ್ರಯುಕ್ತ ನಡೆಸಿದ ಹರ್ಷೋತ್ಸವ–2026 ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.




ಗದಗ ಜಿಲ್ಲಾ ಕ.ಸಾ.ಪ ಕೋಶಾಧ್ಯಕ್ಷರಾದ ಡಿ.ಎಸ್. ಬಾಪುರಿ ಮಾತನಾಡಿ, ಇಂದು ನೂತನ ವರ್ಷಾಚರಣೆ ನೆಪದಲ್ಲಿ ಜನತೆ ಅದರಲ್ಲೂ ಯುವ ಜನತೆ ಹೆಚ್ಚಿನ ದುಂದುವೆಚ್ಚ, ಮೋಜು–ಮಸ್ತಿ ಮಾಡಿ ಹಣ ಮತ್ತು ಸಮಯವನ್ನು ವ್ಯರ್ಥವಾಗಿ ಹಾಳು ಮಾಡುವರು. ಈ ಪದ್ಧತಿ ನಿವಾರಣೆಗೆ ಮತ್ತು ಯುವ ಜನತೆ ಸನ್ಮಾರ್ಗದಲ್ಲಿ ನಡೆಯಲೆಂಬ ಉದ್ದೇಶದಿಂದ ಬಸವ ಯೋಗ ಮಹಾವಿದ್ಯಾಲಯದ ವಿದ್ಯಾರ್ಥಿವೃಂದ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸದಸ್ಯನಿಯರು ಸೇರಿ ಹೊಸ ವರ್ಷಾಚರಣೆಯನ್ನು ಹರ್ಷೋತ್ಸವವನ್ನಾಗಿ ಆಚರಿಸುತ್ತಿರುವುದು ಮಾದರಿಯಾಗಿದೆ ಎಂದರು. ಕೆ.ವಿ.ಎಸ್.ಆರ್ ಕಾಲೇಜು ಪ್ರಾಧ್ಯಾಪಕ ಶಶಿಧರ ಕುರಿ ಮಾತನಾಡಿದರು. ವೇದಿಕೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ, ನಿವೃತ್ತ ಕೃಷಿ ವಿಜ್ಞಾನಿ ಡಾ. ಎಸ್.ಕೆ. ನಾಲತ್ವಾಡಮಠ ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷರಾದ ಎಂ.ಎಸ್. ಶಿರಿಯಣ್ಣವರ ಮಾತನಾಡಿ, ಗಣ್ಯಮಾನ್ಯರು ತಿಳಿಸಿರುವ ವಿಷಯಗಳನ್ನು ಕಾರ್ಯಕ್ರಮದಲ್ಲಿ ಭಾಗಿಯಾದವರೆಲ್ಲರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ನಾಡಿನ ಪ್ರಗತಿಗಾಗಿ ಶ್ರಮಿಸಿದರೆ ಕಾರ್ಯಕ್ರಮದ ಸಾರ್ಥಕತೆಗೆ ಸಹಕರಿಸಿದಂತಾಗುವುದೆಂದರು.

ಸಂಜೆ ನಡೆದ ಕಾರ್ಯಕ್ರಮದಲ್ಲಿ ನವೀನ ಪಲ್ಲೇದ, ಜಯಶ್ರೀ ದಾವಣಗೇರಿ ಮುಂತಾದವರಿಂದ ವಿವರಣಾತ್ಮಕ ಯೋಗಾಸನ ಪ್ರದರ್ಶನ, ಗೀತಾ ಭೂಪಳಾಪೂರ, ವೀಣಾ ಗೌಡರ, ಶಾಂತಾ ಮುಂದಿನಮನಿ, ಕೃಷ್ಣಪ್ರಿಯ ಬದಿ, ಅರುಣ ಇಂಗಳಳ್ಳಿ, ಕಸ್ತೂರಿ ಮರಿಗೌಡರ, ವಿಜಯಲಕ್ಷ್ಮೀ ಆನೆಹೊಸೂರ, ವಿಜಯಲಕ್ಷ್ಮೀ ಮೇಕಳಿ, ಗೌರಿ ಜಿರಂಕಳಿ, ಲಲಿತಾ ಕಡಗದ, ಅಂಬಿಕಾ ರೂಡಗಿ, ಸುಲೋಚಾ ಐಹೊಳ್ಳಿ, ವೀಣಾಶ್ರೀ ಮಾಲಿಪಾಟೀಲ ಇವರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಕಾರ್ಯಕ್ರಮದಲ್ಲಿ ಅಂದಾನೆಪ್ಪ ವಿಭೂತಿ, ಜಿ.ಪಿ. ಕಟ್ಟಿಮನಿ, ವಿ.ಪಿ. ಸವಡಿ, ವ್ಹಿ.ಎಂ. ಮುಂದಿನಮನಿ, ಎಸ್.ಬಿ. ಆನೆಹೊಸೂರ, ಬಸವರಾಜ ತೋಟಿಗೇರ, ಅಶೋಕ ಬಾರಕೇರ, ಷಡಕ್ಷರಿ ಮೆಣಸಿನಕಾಯಿ, ಸಿ.ಬಿ. ಭದ್ರಾಪೂರ, ಎಸ್.ಎಸ್. ಭೊಸಲೆ, ಪಾರ್ವತಿ ಭೂಮಾ, ಗಂಗಾ ಹುಚ್ಚನ್ನವರ, ವೀಣಾ ಅಕ್ಕಿ, ತನುಜಾ ವೆರ್ಣೇಕರ್, ಕಸ್ತೂರಿ ಮರಿಗೌಡರ, ಜಯಶ್ರೀ ಪುರದ, ವಿಜಯಾ ಚನ್ನಶೆಟ್ಟಿ, ಜಯಶ್ರೀ ವಸ್ತ್ರದ, ಸುನಿತಾ ಓಲಿ, ಶೋಭಾ ಭಾಂಡಗೆ, ಗಿರಿಜಾ ಅಂಗಡಿ, ಶಕುಂತಲಾ ಬ್ಯಾಳಿ, ಸುಜಾತಾ ಮಾಗಡಿಯವರ, ಮಂಜುಳಾ ಬುಳ್ಳಾ, ಅನ್ನಪೂರ್ಣ ಅಸೂಟಿ ಮುಂತಾದವರಿದ್ದರು.

ಡಾ. ಎಮ್.ವ್ಹಿ. ಐಹೊಳ್ಳಿ ಸ್ವಾಗತಿಸಿದರು. ವಿ.ಎಂ. ಮುಂದಿನಮನಿ ಪರಿಚಯಿಸಿದರು. ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಪ್ರಾಸ್ತಾವಿಕ ನುಡಿ ತಿಳಿಸಿದರು. ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಬಿ.ಗೌಡರ ಕಾರ್ಯಕ್ರಮ ನಿರೂಪಿಸಿದರು.

# ಹೊರಗುತ್ತಿಗೆ ನೌಕರರನ್ನು ಖಾಯಂಗೊಳಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆಯ 92 ಹೊರಗುತ್ತಿಗೆ ಪೌರಕಾರ್ಮಿಕರನ್ನು, ವಾಹನ ಚಾಲಕರನ್ನು ಖಾಯಂ ಮಾಡುವಂತೆ ಜೈ ಭೀಮ್ ಸಂಘರ್ಷ ಸಮಿತಿ ಗದಗ ಜಿಲ್ಲಾ ಗದಗ ಜಿಲ್ಲಾಧ್ಯಕ್ಷ ಗಣೇಶ ವಾಯ್.ಹುಬ್ಬಳ್ಳಿ, ಉಪಾಧ್ಯಕ್ಷ ರಾಜೇಶ ಶೆಟ್ಟರ್ ನೇತೃತ್ವದಲ್ಲಿ ಗದಗ ತಹಸೀಲ್ದಾರ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿ ಗಣೇಶ ಹುಬ್ಬಳ್ಳಿ ಮಾತನಾಡಿ, ಹೊರಗುತ್ತಿಗೆ ಆಧಾರದ ಮೇಲೆ ಸುಮಾರು 10 ವರ್ಷಗಳಿಂದ ಗದಗ–ಬೆಟಗೇರಿ ನಗರಸಭೆಯಲ್ಲಿ ಹೊರಗುತ್ತಿಗೆ ಪೌರಕಾರ್ಮಿಕರಾಗಿ 92 ಜನರು ಸೇರಿದಂತೆ ಕಸ ಸಾಗಾಣಿಕೆಯ ವಾಹನ ಚಾಲಕರಾಗಿ ದುಡಿಯುತ್ತಿದ್ದಾರೆ. ಇವರೆಲ್ಲರೂ ನಗರದ ಸ್ವಚ್ಛತೆಗಾಗಿ ದುಡಿಯುತ್ತಿದ್ದು, ಎಲ್ಲರನ್ನೂ ಮಾನವೀಯತೆ ಮೇಲೆ ರಾಜ್ಯ ಸರ್ಕಾರ ನೇರ ನೇಮಕಾತಿ ಮಾಡಿ ನಮ್ಮ ಜೀವನಕ್ಕೆ ಭದ್ರತೆ ಒದಗಿಸಿ ಕುಟುಂಬ ನಿರ್ವಹಣೆಗೆ ಅನುಕೂಲ ಮಾಡಿಕೊಡಬೇಕೆಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಜೈ ಭೀಮ್ ಸಂಘರ್ಷ ಸಮಿತಿಯ ಗದಗ ಜಿಲ್ಲಾಧ್ಯಕ್ಷ ಗಣೇಶ ವಾಯ್.ಹುಬ್ಬಳ್ಳಿ, ಉಪಾಧ್ಯಕ್ಷರಾದ ಮಂಜುನಾಥ ಎಫ್.ತೌಜಲ್, ಜೈ ಭೀಮ್ ಸಂಘರ್ಷ ಸಮಿತಿಯ ರೋಣ ತಾಲೂಕಾಧ್ಯಕ್ಷರಾದ ಬಸವರಾಜ ಬದಾಮಿ, ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ರಾಷ್ಟ್ರೀನ್ ಜೋಸೆಪ್, ಉಪಾಧ್ಯಕ್ಷ ರಾಜೇಶ ವಿ.ಶೆಟ್ಟರ್, ಯುವ ಘಟಕದ ಜಿಲ್ಲಾಧ್ಯಕ್ಷ ಇಮಾಮಹುಸೇನ ಕುನ್ನಿಬಾವಿ, ಕಾರ್ಯದರ್ಶಿ ಸಮೀರಅಹ್ಮದ ಕುನ್ನಿಬಾವಿ, ಯುವ ಘಟಕ ಅಧ್ಯಕ್ಷ ಪ್ರೇಮಕುಮಾರ ಹುಬ್ಬಳ್ಳಿ, ಮಂಜುನಾಥ ಸುಂಕದ, ಶ್ರೀಕಾಂತ ಹಲವಾಗಲಿ, ರಮೇಶ ರಾಲದೊಡ್ಡಿ, ಹೇಮಂತ ಹುಬ್ಬಳ್ಳಿ, ವಿರೂಪಾಕ್ಷ ಗೌಡರ, ಗಿರೀಶ ಚಳಗೇರಿ, ರಫೀಕ ನವಲಗುಂದ, ಫರದೀನ ಕಾಟಾಪುರ, ಮಲ್ಲೇಶ ಮೇಳದಾಳಮಠ ಉಪಸ್ಥಿತರಿದ್ದರು.

# ಗದಗ ಜಿಲ್ಲಾ ಗೃಹರಕ್ಷಕ ದಳಕ್ಕೆ ಚನ್ನಾರಡ್ಡಿ ಹೊಸ ಗೌರವ ಸಮಾದೇಷ್ಟರಾಗಿ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲಾ ಗೃಹರಕ್ಷಕ ದಳದ ಗೌರವ ಸಮಾದೇಷ್ಟರಾಗಿ ನ್ಯಾಯವಾದಿ ಚನ್ನಾರೆಡ್ಡಿ ಬಸವರಾಜ ಗೊಳರೆಡ್ಡಿ ನೇಮಕಗೊಂಡಿದ್ದಾರೆ.

ಜನವರಿ 1, 2026ರಂದು ನಡೆದ ಸರಳ ಕಾರ್ಯಕ್ರಮದಲ್ಲಿ ಆರಕ್ಷಕ ಮಹಾ ನಿರ್ದೇಶಕರು ಮತ್ತು ಗೃಹರಕ್ಷಕ ದಳದ ಮಹಾ ಸಮಾದೇಷ್ಟರುಗಳು, ಬೆಂಗಳೂರು ಅವರ ಆದೇಶದಂತೆ ಈ ಹುದ್ದೆಯ ಜವಾಬ್ದಾರಿಯನ್ನು ಅವರು ವಹಿಸಿಕೊಂಡಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಮಾಜಿ ಸಮಾದೇಷ್ಟರಾದ ಬಿ.ಎ. ಗೊಳರೆಡ್ಡಿ, ಅಡ್ಜುಟೆಂಟ್ ಕೆ.ಸಿ. ವಕ್ಕಳದ್, ಜಿಲ್ಲಾ ಬೋಧಕರಾದ ಕಿರಣಕುಮಾರ ಕಟಗಿ, ಪ್ರದಸ ಟಿ.ಎಲ್. ರಾಜಕುಮಾರ್, ಗದಗ ಘಟಕಾಧಿಕಾರಿ ಎಸ್. ಎಫ್. ದೊಡ್ಡಮನಿ, ಮುಳಗುಂದ ಪ್ರಭಾರ ಘಟಕಾಧಿಕಾರಿ ಎಂ.ಆರ್. ಆನಂದ್ರಬಾವಿ, ಹೊಳೆಆಲೂರ ಪ್ರಭಾರ ಘಟಕಾಧಿಕಾರಿ ಸಿ.ಜಿ. ಮುದಿಯಪ್ಪನವರ, ಕುರ್ತಕೋಟಿ ಪ್ರಭಾರ ಘಟಕಾಧಿಕಾರಿ ಆರ್. ಎಂ. ಹುಡೇದ್ ಹಾಗೂ ಹಲವಾರು ಗೃಹರಕ್ಷಕರು ಮತ್ತು ಗೃಹರಕ್ಷಕಿಯರು ಹಾಜರಿದ್ದರು.

ಡಾ. ಆರ್.ಎನ್. ಗೋಡಬೋಲೆ ಹೊಸ ಸಮಾದೇಷ್ಟರನ್ನು ಸ್ವಾಗತಿಸಿ, ಬೋಧಿಸಿದರು. ನ್ಯಾಯವಾದಿಗಳಾದ ಎಸ್. ಕೆ.ನಧಾಪ್, ಸಾಹಿತಿಗಳಾದ ಎ.ಎಸ್. ಮಕಾನದಾರ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಗೃಹರಕ್ಷಕ ದಳವು ಪೊಲೀಸ್ ಇಲಾಖೆಗೆ ಪೂರಕವಾಗಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ. ನೂತನ ಸಮಾದೇಷ್ಟರಾಗಿ ಅಧಿಕಾರ ವಹಿಸಿಕೊಂಡ ಚನ್ನಾರೆಡ್ಡಿ ಅವರ ನೇತೃತ್ವದಲ್ಲಿ ಜಿಲ್ಲಾ ದಳದ ಸೇವೆಯು ಇನ್ನಷ್ಟು ಬಲಗೊಳ್ಳಲಿದೆ ಎಂದು ಅಧಿಕಾರಿಗಳು ಆಶಯ ವ್ಯಕ್ತಪಡಿಸಿದ್ದಾರೆ.

# ಹಿಂದೂ ಪಂಗಡಗಳನ್ನು ಒಗ್ಗೂಡಿಸುವ ಅಗತ್ಯವಿದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಂದಿನ ದಿನಗಳಲ್ಲಿ ಸಮಾಜದಲ್ಲಿನ ವಿವಿಧ ಹಿಂದೂ ಪಂಗಡಗಳನ್ನು ಒಗ್ಗೂಡಿಸುವುದು ಅತ್ಯಂತ ಅವಶ್ಯಕವಾಗಿದೆ. ಅದಕ್ಕಾಗಿ ಎಲ್ಲೆಡೆ ಇಂತಹ ಸಭೆಗಳನ್ನು ಏರ್ಪಡಿಸಲಾಗುತ್ತಿದೆ ಎಂದು ಹುಬ್ಬಳ್ಳಿಯ ರವಿ ಮುಂಡಗೋಡ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದ ಹಿಂದೂ ಸಮ್ಮೇಳನದ ಹೋಬಳಿ ವಿಸ್ತ್ರತ ಬೈಠಕ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಸಮಾಜಮುಖಿ ಕಾರ್ಯಕ್ಕೆ ಸದ್ಭಾವನಾ ಗೋಷ್ಠಿ ನಡೆಸಲಾಗುವದು. ನರೇಗಲ್ಲ ಹೋಬಳಿಯ ವ್ಯಾಪ್ತಿಯಲ್ಲಿ ಈ ಸಮಾವೇಶ ಮಾಡಲು ನಿರ್ಧರಿಸಲಾಗಿದೆ. ಹಿಂದೂ ನಾಗರಿಕತೆ, ಹಿಂದೂ ಸಂಸ್ಕೃತಿಗಳ ಚಿಂತನ–ಮಂಥನಗಳನ್ನು ನಡೆಸುವದು ಇದರ ಉದ್ದೇಶವಾಗಿದೆ. ಜಾತಿ, ಮತ, ಪಂಥಗಳಿಂದ ಒಡೆದು ಹೋದ ಅಖಂಡ ಹಿಂದೂ ಸಮಾಜವನ್ನು ಒಗ್ಗೂಡಿಸುವದು ಇದರ ಮುಖ್ಯ ಉದ್ದೇಶವಾಗಿದೆ ಎಂದರು.

ಇತ್ತೀಚಿನ ಕೆಲವೊಂದು ರಾಷ್ಟ್ರಗಳಲ್ಲಿ ಹಿಂದೂಗಳ ಮೇಲೆ ನಿರಂತರ ಮಾರಣಾಂತಿಕ ಹಲ್ಲೆಗಳಾಗುತ್ತಿವೆ.

ಹಿಂದೂಗಳ ಮೇಲೆ ದೌರ್ಜನ್ಯಗಳು ನಡೆಯುತ್ತಿರುವುದು ಖಂಡನೀಯ. ಎಲ್ಲದಕ್ಕೂ ಉತ್ತರ ಕೊಡುವದಕ್ಕೆ ಸಂಘಟನೆಯೊಂದೇ ರಾಮಬಾಣ. ಕಳೆದ ನೂರು ವರ್ಷಗಳಿಂದ ನಡೆದು ಬಂದ ರಾಷ್ಟ್ರೀಯ ಸ್ವಯಂ ಸೇವಕ ಸಂಘಟನೆಯ ಮಹತ್ವ ಹಾಗೂ ರಾಷ್ಟ್ರೀಯ ಚಿಂತನೆಗಳ ಮಹತ್ವವನ್ನು ಇಡೀ ಜಗತ್ತಿಗೆ ಸಾರಿ ತಿಳಿಸೋಣ ಎಂದರು.

ಸಭೆಯಲ್ಲಿ ಡಾ. ಆರ್.ಕೆ. ಗಚ್ಚಿನಮಠ, ಆನಂದ ಕುಲಕರ್ಣಿ, ರಘುನಾಥ ಕೊಂಡಿ, ಬಸವರಾಜ ವಂಕಲಕುಂಟಿ, ಶಶಿಧರ ಸಂಕನಗೌಡ್ರ, ಉಮೇಶ ಸಂಗನಾಳಮಠ, ಬಾಳಪ್ಪ ಸೋಮಗೊಂಡ, ಶಿವಾನಂದ ಇಟಗಿ, ಕಳಕಪ್ಪ ಪೂಜಾರ, ಮುತ್ತಣ್ಣ ಪಲ್ಲೇದ, ನಾರಾಯಣ ವಡ್ಡಟ್ಟಿ, ಚನಬಸಪ್ಪ ಕುಷ್ಟಗಿ, ಚಂದ್ರಾಮ ಗ್ರಾಮಪುರೋಹಿತ, ಶಿವನಾಗಪ್ಪ ದೊಡ್ಡಮೇಟಿ, ಮಲ್ಲಿಕಾರ್ಜುನ ಹರ್ಲಾಪೂರ, ಪುಂಡಪ್ಪ ಮಡಿವಾಳರ, ಹನಮಂತಗೌಡ ಪಾಟಿಲ, ಜ್ಯೋತಿ ಪಾಯಪ್ಪಗೌಡ್ರ, ಸುರೇಖಾ ರಾಯಬಾಗಿ, ಅರ್ಚನಾ ಕುಲಕರ್ಣಿ, ಜ್ಯೋತಿ ಒಂಕಲಕುಂಟಿ, ಗೀತಾ ಮುಗಳಿ, ಸುಮಾ ಕಲ್ಲೂರ ಸೇರಿದಂತೆ ಹೋಬಳಿಯ ಗ್ರಾಮಸ್ಥರು ಉಪಸ್ಥಿತರಿದ್ದರು.

ಸುರೇಶ ರಾಯಬಾಗಿ ಸ್ವಾಗತಿಸಿದರು. ಮಂಜುನಾಥ ಹೆಗಡೆ ನಿರೂಪಿಸಿದರು. ಮೌನೇಶ ಹೊಸಮನಿ ವಂದಿಸಿದರು.



# ಅಯ್ಯಪ್ಪ ವ್ರತದಿಂದ ಮನಸ್ಸಿಗೆ ಶಾಂತಿ




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಅಯ್ಯಪ್ಪಸ್ವಾಮಿ ವ್ರತ ಕೈಗೊಳ್ಳುವುದರಿಂದ ಮನಸ್ಸಿಗೆ ಶಾಂತಿ, ನೆಮ್ಮದಿ ಲಭಿಸುವುದು ಎಂದು ಅಯ್ಯಪ್ಪಸ್ವಾಮಿ ಗುರು ರಾಜು ಪವಾರ ಗುರುಸ್ವಾಮಿ ಹೇಳಿದರು.

ಅವರು ಪಟ್ಟಣದ ಮಣಿಕಂಠ ಸಮಗ್ರ ಅಯ್ಯಪ್ಪಸ್ವಾಮಿ ದೇವಸ್ಥಾನದಲ್ಲಿ ಅಯ್ಯಪ್ಪಸ್ವಾಮಿ ಮಾಲಾಧಾರಿಗಳ ಪಡಿ ಪೂಜಾ ಕಾರ್ಯಕ್ರಮ ನೆರವೇರಿಸಿ ಮಾತನಾಡಿ, 48 ದಿನಗಳ ಅಯ್ಯಪ್ಪಸ್ವಾಮಿ ವ್ರತದಿಂದ ಆರೋಗ್ಯ ವೃದ್ಧಿ, ಮನಸ್ಸಿಗೆ ನೆಮ್ಮದಿ, ಉತ್ತಮ ಬದುಕು ದೊರೆಯುತ್ತದೆ ಎಂದರು.

ಗುರುಸ್ವಾಮಿಗಳಾದ ಮಾಹಾಂತೇಶ ಸ್ವಾಮಿ, ಈಶ್ವರ ಸ್ವಾಮಿ, ಶಿವು ಗುರುಸ್ವಾಮಿ, ಮಾಲಾಧಾರಿಗಳು ಹಾಗೂ ನೂರಾರು ಭಕ್ತರು ಇದ್ದರು.

## ನಿಧನ

### ರವಿ ಇಮರಾಪೂರ



**ಗದಗ :** ನಗರದ ಹುಡ್ಕೊ ನಿವಾಸಿ, ಹೆಸ್ಕಾಂ ನೌಕರರಾದ ರವಿ ಬಸವರಾಜ ಇಮರಾಪೂರ(53) ಅವರು ಅಣ್ಣಿಗೇರಿ ಹತ್ತಿರದ ಬಸಾಪೂರ ಕಾಲುವೆ ಸಮೀಪ ಸೋಮವಾರ ಜರುಗಿದ ಅಪಘಾತದಲ್ಲಿ ನಿಧನರಾಗಿದ್ದಾರೆ. ಮೃತರ ಅಂತಿಮಯಾತ್ರೆ ಮಂಗಳವಾರ ಬೆಳಿಗ್ಗೆ 10 ಗಂಟೆಗೆ ಗಂಗಾಪೂರ ಪೇಟೆಯಿಂದ ಹೊರಡಲಿದೆ.

ಮೃತರು ಪತ್ರಕರ್ತರಾದ ವೆಂಕಟೇಶ ಇಮರಾಪೂರ ಸೇರಿದಂತೆ ಮೂವರು ಸಹೋದರರು, ಪತ್ನಿ, ಇಬ್ಬರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಳಗವನ್ನು ಅಗಲಿದ್ದಾರೆ.

# ಕುಮಾರವ್ಯಾಸ ಜಯಂತಿ ಆಚರಣೆ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುಳಗುಂದ ನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ಗದಗ ಜಿಲ್ಲೆಯ ಸಂಸ್ಕಾರಭಾರತಿ ಸಹಯೋಗದಲ್ಲಿ ಜ. 6ರಂದು ಸಂಜೆ 6.30 ಗಂಟೆಗೆ 343ನೇ ಮಾಸಿಕ ಶಿವಾನುಭವ ಹಾಗೂ ಕುಮಾರವ್ಯಾಸ ಜಯಂತಿ ಆಚರಣೆ ಜರುಗಲಿದೆ.

ಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಸಮ್ಮುಖ ವಹಿಸುವರು. ಶಿವಾನುಭವ ಸಮಿತಿ ಅಧ್ಯಕ್ಷರಾದ ಡಾ. ರಾಜೇಂದ್ರ ಗಡಾದ ಅಧ್ಯಕ್ಷತೆ ವಹಿಸುವರು. ಗಮಕ ಕಲಾರತ್ನ ಗುರುವಿನಹಳ್ಳಿಯ ವಿಶ್ವನಾಥ ಕುಲಕರ್ಣಿ ಗದುಗಿನ ಭಾರತ ವಾಚನ-ವ್ಯಾಖ್ಯಾನ ಕುರಿತು ಉಪನ್ಯಾಸ ನೀಡುವರು. ಸಂಗೀತ ಶಿಕ್ಷಕ ಶ್ರೀಕಾಂತ ಹೂಲಿ ಸಂವಾದಿನಿ ಸಾಥ್ ನೀಡುವರು. ಗದಗ ಜಿಲ್ಲಾ ಸಂಸ್ಕಾರಭಾರತಿ ಅಧ್ಯಕ್ಷರಾದ ಪಿ.ಎ. ಕುಲಕರ್ಣಿ ಗೌರವ ಉಪಸ್ಥಿತಿ ವಹಿಸುವರು.

ಜಾತ್ರಾಮಹೋತ್ಸವ ಸಮಿತಿ ಅಧ್ಯಕ್ಷರಾದ ಸದಾಶಿವಯ್ಯ ಎಸ್.ಮದರಿಮಠ, ಸುವರ್ಣ ಎಸ್.ಮದರಿಮಠ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಹಿರಿಯ ನಾಗರಿಕ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಬಿ.ಡಿ. ಕಿಲಬನವರ, ಜಿಲ್ಲಾ ಬ್ಯಾಡ್ಮಿಂಟನ್ ಟ್ರೋಫಿ ವಿಜೇತರಾದ ಕುಮಾರ ವೇದಾಂತ, ರಾಜು, ಸಿಕ್ಕಲಗಾರ ಅವರನ್ನು ಸನ್ಮಾನಿಸಲಾಗುವುದು. ಬಳಿಕ ಲಿಂ. ಶ್ರೀಮತಿ ಶೋಭಾ ಶಿದ್ರಾಮಯ್ಯ ಸಂಶಿಮಠ ಅವರ ಶ್ರದ್ಧಾಂಜಲಿ ಕಾರ್ಯಕ್ರಮ ಜರುಗುವುದು.

ಆರೋಗ್ಯ ಇಲಾಖೆಯ ಮಂಜುನಾಥ ಕಿಲಬನವರ ಹಾಗೂ ರಾಜೇಶ್ವರಿ ಕಲಾ ಕುಟೀರದ ಸಂಸ್ಥಾಪಕರಾದ ಗಜಾನನ ಶೇಷಗಿರಿ ವೆರ್ಣೇಕರ, ಶಿವಾನುಭವ ಸಮಿತಿ ಪ್ರಧಾನ ಕಾರ್ಯದರ್ಶಿ ಪ್ರಭುಗೌಡ ಪಾಟೀಲ, ಸಾಂಸ್ಕೃತಿಕ ಕಾರ್ಯದರ್ಶಿ ಗುರಪ್ಪ ನಿಡಗುಂದಿ, ಕೋಶಾಧ್ಯಕ್ಷರಾದ ಸಿದ್ಧಣ್ಣ ಜವಳಿ ಉಪಸ್ಥಿತರಿರುವರು ಎಂದು ಪ್ರಕಟಣೆ ಕೋರಿದೆ.

### ಪಂಚ ಗ್ಯಾರಂಟಿ ಯೋಜನಾ ಕಾರ್ಯಾಗಾರ, ಗ್ಯಾರಂಟಿ ಉತ್ಸವದಲ್ಲಿ ಪ್ರಾಧಿಕಾರದ ಅಧ್ಯಕ್ಷ ಹೆಚ್.ಎಂ. ರೇವಣ್ಣ

# ಗ್ಯಾರಂಟಿ ಅನುಷ್ಠಾನದಲ್ಲಿ ಧಾರವಾಡ ಜಿಲ್ಲೆ ಪ್ರಥಮ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸಹ ಗ್ಯಾರಂಟಿ ಯೋಜನೆಗಳು ತಲುಪಬೇಕು. ಧಾರವಾಡ ಜಿಲ್ಲೆಯ ಶೇ. 98ರಷ್ಟು ಫಲಾನುಭವಿಗಳಿಗೆ ಗ್ಯಾರಂಟಿ ಯೋಜನೆಗಳ ಹಣವನ್ನು ನೇರವಾಗಿ ತಲುಪಿಸಲಾಗುತ್ತಿದೆ. ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಇಡೀ ರಾಜ್ಯದಲ್ಲೇ ಧಾರವಾಡ ಜಿಲ್ಲೆ ಪ್ರಥಮ ಸ್ಥಾನದಲ್ಲಿದೆ ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ಎಂ. ರೇವಣ್ಣ ಹೇಳಿದರು.

ಅವರು ಸೋಮವಾರ ಧಾರವಾಡದ ಕೆ.ಸಿ.ಡಿ ಕಾಲೇಜು ಆವರಣದಲ್ಲಿರುವ ಶ್ರೀ ಅಣ್ಣಾಜಿರಾವ ಶಿರೂರ (ಸೃಜನಾ) ರಂಗಮಂದಿರದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯಿತಿ ಮತ್ತು ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಸಹಯೋಗದಲ್ಲಿ ಆಯೋಜಿಸಿದ್ದ ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತುಜಿಲ್ಲಾ ಮಟ್ಟದ ಗ್ಯಾರಂಟಿ ಕಾರ್ಯಾಗಾರ ಮತ್ತು ಗ್ಯಾರಂಟಿ ಉತ್ಸವವನ್ನು ಉದ್ಘಾಟಿಸಿ ಮಾತನಾಡಿದರು.



ಕಾರ್ಮಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳಿಗಾಗಿ ವರ್ಷಕ್ಕೆ 60 ಸಾವಿರ ಕೋಟಿ ರೂ ಖರ್ಚು ಮಾಡಲಾಗುತ್ತಿದೆ. ಗ್ಯಾರಂಟಿ ಯೋಜನೆಗಳ ಮೂಲಕ ನಿಮ್ಮ ಹಣವನ್ನು ನಿಮಗೆ ನೀಡುತ್ತಿದ್ದೇವೆ. ಅಸಂಘಟಿತ ವಲಯದ ಕಾರ್ಮಿಕರಿಗೆ ಸಹ ಕಾರ್ಮಿಕ ಇಲಾಖೆಯಿಂದ ಸವಲತ್ತುಗಳನ್ನು ಒದಗಿಸಲಾಗುತ್ತಿದೆ. ಈ ದೇಶವು 145 ಕೋಟಿ ಜನರ ಆಸ್ತಿಯಾಗಿದೆ ಎಂದರು.

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಬೆಳಗಾವಿ ವಿಭಾಗದ ಉಪಾಧ್ಯಕ್ಷ ಎಸ್.ಆರ್. ಪಾಟೀಲ ಮಾತನಾಡಿ, ಬೆಳಗಾವಿ ವಿಭಾಗದಲ್ಲಿ ನಡೆಯುತ್ತಿರುವ ಮೂರನೇ ಕಾರ್ಯಕ್ರಮ ಇದಾಗಿದೆ. ಈಗಾಗಲೇ ಹಾವೇರಿ, ಬೆಳಗಾವಿ ಜಿಲ್ಲೆಯಲ್ಲಿ ಗ್ಯಾರಂಟಿ ಉತ್ಸವವನ್ನು ಯಶಸ್ವಿಯಾಗಿ ಮಾಡಲಾಗಿದೆ. ಗ್ಯಾರಂಟಿ ಯೋಜನೆಗಳು ನಾಳಿನ ಭರವಸೆಗೆ ಬೆಳಕಾಗಿವೆ. ಮಧ್ಯವರ್ತಿಗಳ ಹಾವಳಿಯಿಲ್ಲದೇ ನೇರವಾಗಿ ಫಲಾನುಭವಿಗಳಿಗೆ ಹಣ ತಲುಪುತ್ತಿವೆ ಎಂದರು.

ಧಾರವಾಡ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್. ಆರ್. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳನ್ನು ಚುನಾವಣೆ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಲಾಗಿತ್ತು. ಅದರಂತೆ ಪ್ರತಿ ಮನೆ ಮನೆಗೆ ಗ್ಯಾರಂಟಿ ಯೋಜನೆಗಳು ತಲುಪುತ್ತಿವೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಶಿಬಿರಗಳನ್ನು ಆಯೋಜನೆ ಮಾಡಿ, ಗ್ಯಾರಂಟಿ ಯೋಜನೆಗಳನ್ನು ತಲುಪಿಸಲಾಗುತ್ತಿದೆ ಎಂದರು. ಗ್ಯಾರಂಟಿ ಯೋಜನೆಗಳ ಕುರಿತು ವಿಶೇಷ ಉಪನ್ಯಾಸದಲ್ಲಿ ಡಾ. ವಾಸು ಎಚ್ ಮಾತನಾಡಿ, 15 ಜಿಲ್ಲೆಗಳಲ್ಲಿ ಗ್ಯಾರಂಟಿ ಕಾರ್ಯಾಗಾರ ಯಶಸ್ವಿಯಾಗಿ ನಡೆದಿದೆ. ಇಂದು ಧಾರವಾಡದಲ್ಲಿ ಬಹಳ ವಿಜೃಂಭಣೆಯಿಂದ ಜರುಗುತ್ತಿದೆ. ಗ್ಯಾರಂಟಿ ಯೋಜನೆಗಳು ಜನರಿಗೆ ಸೌಲಭ್ಯ ತಲುಪಿಸುವ ಕಾರ್ಯಕ್ರಮಗಳಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಎಸ್.ಖಾದ್ರಿ, ವಿ.ಪ ಸದಸ್ಯ ಎಫ್.ಹೆಚ್. ಜಕ್ಕಪ್ಪನವರ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಸೇರಿದಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಪದಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಫಲಾನುಭವಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

ಶರೀಫ್ ದೊಡ್ಡಮನಿ ಮತ್ತು ತಂಡದವರು ನಾಡಗೀತೆ ಹಾಡಿದರು. ಜಿ.ಪಂ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಸ್ವಾಗತಿಸಿದರು. ಡಾ. ರೇಣುಕಾ ಅಮಲಝರಿ ಕಾರ್ಯಕ್ರಮ ನಿರೂಪಿಸಿದರು.

> ಶಾಸಕ ಎನ್.ಎಚ್. ಕೋನರಡ್ಡಿ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳನ್ನು 5 ವರ್ಷಗಳ ಕಾಲ ನಿರಂತರವಾಗಿ ನೀಡುತ್ತೇವೆ. ಮಹಿಳೆಯರ ಮನದಾಳ ಮಾತುಗಳಿಂದ ಗ್ಯಾರಂಟಿ ಯೋಜನೆಗಳು ಯಾವ ರೀತಿಯಲ್ಲಿ ತಲುಪುತ್ತಿವೆ ಎಂಬುದನ್ನು ತಿಳಿಯಬಹುದಾಗಿದೆ. ಈ ಹಿಂದೆ ವಿದ್ಯುತ್ ಬಿಲ್ ಪಾವತಿ ಮಾಡದಿದ್ದರೆ, ವಿದ್ಯುತ್ ಕಟ್ ಮಾಡುತ್ತಿದ್ದರು. ಆದರೆ ಈಗ ಗೃಹಜ್ಯೋತಿ ಯೋಜನೆಯಿಂದ ಎಲ್ಲರಿಗೂ ಅನುಕೂಲವಾಗಿದೆ. ರಾಜ್ಯ ಸರ್ಕಾರ ಬದ್ಧತೆಯಿಂದ ಕೆಲಸ ಮಾಡುತ್ತಿದೆ. ಕರ್ನಾಟಕ ಸರ್ಕಾರ ಜನರ ಪರವಾಗಿದೆ ಎಂದು ಹೇಳಿದರು.

### 'ಕರುನಾಡು ಘರ್ಜನೆ' ಪತ್ರಿಕೆಯ ಕ್ಯಾಲೆಂಡರ್ ಬಿಡುಗಡೆ ಸಮಾರಂಭ

# ಜನಪರವಾದ ಪತ್ರಿಕೆ ಉತ್ತುಂಗಕ್ಕೇರಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ಕರುನಾಡು ಘರ್ಜನೆ ಪತ್ರಿಕೆಯು ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಜನಪರವಾದ ವಿಚಾರಗಳನ್ನು ಪ್ರಚುರಪಡಿಸುವಲ್ಲಿ ತನ್ನದೇ ಆದ ವಿಶಿಷ್ಟ ಕೊಡುಗೆ ನೀಡುತ್ತಿದೆ. ಈ ಪತ್ರಿಕೆಯು ಹಳ್ಳಿಯಿಂದ ದಿಲ್ಲಿಯವರೆಗೂ ಸಾಮಾಜಿಕ, ಧಾರ್ಮಿಕ ಮತ್ತು ಬಡವರ, ರೈತರ, ಶ್ರಮಿಕರ ಪರವಾದ ಜನಪರವಾದ ವಿಚಾರಗಳನ್ನು ಪ್ರಕಟಿಸಿ ನ್ಯಾಯ ದೊರಕಿಸಿಕೊಡುವ ಪ್ರಯತ್ನ ಮಾಡುವಂತಾಗಲಿ ಎಂದು ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ ಪುಣ್ಯಾಶ್ರಮದ ಶ್ರೀ ಕಲ್ಲಯ್ಯಜ್ಜನವರು ಆಶೀರ್ವಚನ ನೀಡಿದರು.

ಅವರು ಕರುನಾಡು ಘರ್ಜನೆ ಪತ್ರಿಕೆಯ ವತಿಯಿಂದ ಪಂಡಿತ ಪುಟ್ಟರಾಜ ಕವಿ ಗವಾಯಿಗಳರವರ ಪುಣ್ಯಾಶ್ರಮದಲ್ಲಿ ನಡೆದ ಕ್ಯಾಲೆಂಡರ್ ಬಿಡುಗಡೆ ಸಮಾರಂಭದ ಸಾನ್ನಿಧ್ಯ ವಹಿಸಿ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದರು.

ಗದಗ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನರಗುಂದ ಶಾಸಕ ಸಿ.ಸಿ. ಪಾಟೀಲ ಹಾಗೂ ಕಾಟನ್ ಸೇಲ್ ಸೊಸೈಟಿಯಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲ ಪತ್ರಿಕೆಯ ಕ್ಯಾಲೆಂಡರ್ ಬಿಡುಗಡೆ ಮಾಡಿದರು.

ಗದಗ ಜಿಲ್ಲಾ ವಾರ್ತಾ ಇಲಾಖೆ ಅಧಿಕಾರಿಗಳಾದ ವಸಂತ ಮಡ್ಲೂರ ಮಾತನಾಡಿ, ಕರುನಾಡು ಘರ್ಜನೆ ಪತ್ರಿಕೆಯು ತನ್ನ ಪ್ರಾಮಾಣಿಕ ಸೇವೆ ಮತ್ತು ಜನಪರವಾದ ಉದ್ದೇಶದಿಂದ ಸಮಾಜದಲ್ಲಿ ಒಂದು ಹೊಸ ದಿಕ್ಕನ್ನು ತೋರಿಸುತ್ತಿದೆ. ಈ ಪತ್ರಿಕೆಯು ಸಮಾಜದಲ್ಲಿನ ಅನ್ಯಾಯ, ಅಸಮಾನತೆಯನ್ನು ಎದುರಿಸಲು ಮತ್ತು ಜನರಿಗೆ ಸತ್ಯ ಮತ್ತು ನ್ಯಾಯದ ದಾರಿಯನ್ನು ತೋರಿಸಲು ತನ್ನದೇ ಆದ ಕೊಡುಗೆ ನೀಡುತ್ತಿದೆ ಎಂದು ಹೇಳಿದರು.

ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷ ಕೃಷ್ಣ ಎಚ್. ಹಡಪದ ಮಾತನಾಡಿ, ಈ ಪತ್ರಿಕೆಯ ಸಂಪಾದಕರುಗಳಾದ ಶೌಕತ್ ಕಾತರಕಿ ಮತ್ತು ಯಾಸೀನಸಾಬ ಬೋದ್ಲೆಖಾನ್ ಅವರ ನಿರಂತರ ಪ್ರಯತ್ನ ಮತ್ತು ಸಮರ್ಪಣೆಯಿಂದ ಸಮಾಜದಲ್ಲಿನ ಅಂತಿಮ ವ್ಯಕ್ತಿಗೂ ಧ್ವನಿಯಾಗುತ್ತಿದೆ. ಈ ಪತ್ರಿಕೆಯ ಮೂಲಕ ಸಮಾಜದಲ್ಲಿ ಒಂದು ಹೊಸ ದಿಕ್ಕನ್ನು ತೋರಿಸುತ್ತಿರುವ ತಂಡದ ಸೇವೆ ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಶಿವಾನಂದ ತಮ್ಮನವರ, ಕರೀಮ್ ಸುಣಗಾರ, ಗಣೇಶ ಹುಬ್ಬಳ್ಳಿ, ಪ್ರಕಾಶ್ ಬನ್ನಿಗಿಡದ, ಹನಮಂತಪ್ಪ ರಾಂಪುರ, ಹನುಮಂತ ಪಲದ್ದೊಡಿ, ಕೃಷ್ಣ ಹಡಪದ, ಮೆಹೆಬೂಬ ರೋಣ, ದೇಸಾಯಿ ಮುಂತಾದವರು ಉಪಸ್ಥಿತರಿದ್ದರು.

> ಸಾಮಾಜಿಕ ಕಾರ್ಯಕರ್ತರಾದ ಉಡಚಪ್ಪ ಹಳ್ಳಿಕೇರಿ ಮಾತನಾಡಿ, ಕರುನಾಡು ಘರ್ಜನೆ ಪತ್ರಿಕೆಯು ಸಮಾಜದಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ. ಈ ಪತ್ರಿಕೆಯು ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಜನಪರವಾದ ವಿಚಾರಗಳನ್ನು ಪ್ರಚುರಪಡಿಸುತ್ತಿದೆ ಎಂದ ಅವರು ಕರುನಾಡು ಘರ್ಜನೆ ಪತ್ರಿಕೆಯ ತಂಡಕ್ಕೆ ಶುಭ ಹಾರೈಸಿದರು.

# ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಸಾಧನೆ




■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಗದಗ ಜಿಲ್ಲಾ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ರೋಣ ತಾಲೂಕು ಪಂಚಾಯಿತಿಯ ವ್ಯವಸ್ಥಾಪಕರಾದ ದೇವರಾಜ್ ಸಜ್ಜನಶೆಟ್ಟರ ಬ್ಯಾಡ್ಮಿಂಟನ್ ವಿಭಾಗದಲ್ಲಿ ಅದ್ಭುತ ಪ್ರದರ್ಶನ ನೀಡುವ ಮೂಲಕ ಸಿಂಗಲ್ಸ್ ಹಾಗೂ ಡಬಲ್ಸ್ ಎರಡೂ ವಿಭಾಗಗಳಲ್ಲಿ ಪ್ರಥಮ ಸ್ಥಾನ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಡಬಲ್ಸ್ ವಿಭಾಗದಲ್ಲಿ ದೇವರಾಜ್ ಸಜ್ಜನಶೆಟ್ಟರ ಅವರಿಗೆ ಜಿಲ್ಲಾ ಅಲ್ಪಸಂಖ್ಯಾತ ಇಲಾಖೆ ಅಧಿಕಾರಿ ಅಮಿತ್ ಬಿದರಿ ಅವರು ಜೊತೆಯಾಗಿದ್ದು, ಇಬ್ಬರೂ ಶ್ರೇಷ್ಠ ಆಟ ಪ್ರದರ್ಶಿಸಿ ಪ್ರಥಮ ಬಹುಮಾನಕ್ಕೆ ಭಾಜನರಾಗಿದ್ದಾರೆ. ಈ ಸಾಧನೆಯ ಮೂಲಕ ದೇವರಾಜ್ ಸಜ್ಜನ ಶೆಟ್ಟರ ಅವರು ಖಆಕಖ (ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್) ಇಲಾಖೆಗೆ ಹಾಗೂ ರೋಣ ತಾಲೂಕು ಪಂಚಾಯಿತಿಗೆ ಕೀರ್ತಿ ತಂದಿದ್ದಾರೆ. ಅವರ ಈ ಯಶಸ್ಸಿಗೆ ಇಲಾಖೆಯ ಅಧಿಕಾರಿಗಳು, ಸಹೋದ್ಯೋಗಿಗಳು ಹಾಗೂ ಕ್ರೀಡಾಭಿಮಾನಿಗಳು ಅಭಿನಂದನೆ ಸಲ್ಲಿಸಿದ್ದಾರೆ.

### ಆಕಳ ಕರುಗಳಿಗೆ ತೊಟ್ಟಿಲು, ನಾಮಕರಣ ಶಾಸ್ತ್ರ ಕಾರ್ಯಕ್ರಮದಲ್ಲಿ ಗಂಜಿಗಟ್ಟಿ ಶ್ರೀಗಳು

# ಗೋವು ಎಂದರೆ ದೇವರ ಸ್ವರೂಪ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಎಲ್ಲಿ ಗೋವುಗಳನ್ನು ಪೂಜಿಸಲಾಗುತ್ತದೆಯೋ ಅಲ್ಲಿ ದೇವರು ನೆಲೆಸಿರುತ್ತಾರೆ. ಗೋವು ಎಂದರೆ ದೇವರ ಸ್ವರೂಪ ಎಂಬ ಭಾವ ಹಿಂದೂಗಳಲ್ಲಿದೆ. ಶಿಶು, ಸಸಿ ಮತ್ತು ಹಸು ಎಲ್ಲಿ ನೆಮ್ಮದಿಯಿಂದ ಇರುತ್ತಾರೆಯೋ ಅಲ್ಲಿ ಶಾಂತಿ, ನೆಮ್ಮದಿಯ ವಾತಾವರಣ ನೆಲೆಸಿರುತ್ತದೆ ಎಂದು ಗಂಜಿಗಟ್ಟಿ ಚರಮೂರ್ತೇಶ್ವರಮಠದ ಡಾ. ವೈಜನಾಥ ಶಿವಲಿಂಗ ಮಹಸ್ವಾಮಿಗಳು ನುಡಿದರು.

ಸಮೀಪದ ರಾಮಗಿರಿ ಗ್ರಾಮದ ಮಡಿವಾಳರ ರೈತ ಕುಟುಂಬದಲ್ಲಿ ಎರಡು ಆಕಳುಗಳು ಗಂಡು ಕರುಗಳಿಗೆ ಜನ್ಮ ನೀಡಿದ್ದು, ಅದರಲ್ಲಿ ಒಂದು ಆಕಳಿಗೆ ಚೊಚ್ಚಲ ಕರುವಾಗಿದ್ದು, ಮನೆಯಲ್ಲಿ ಸಂಭ್ರಮ ಮನೆ ಮಾಡಿದೆ. ಚೊಚ್ಚಲ ಹೆರಿಗೆಗೆ ಸಿದ್ಧವಾಗಿರುವ ಗೋವಿಗೆ ಕಳೆದ ಸುಮಾರು 15 ದಿನಗಳ ಹಿಂದೆ ಕುಟುಂಬಸ್ಥರೆಲ್ಲರೂ ಸೇರಿ ಸಿಂಗರಿಸಿ, ಹಬ್ಬದಂತೆ ಗೋವಿಗೆ ಸೀಮಂತ ಕಾರ್ಯ ನೆರವೇರಿಸಿ ಗಮನ ಸೆಳೆದಿದ್ದರು, ಇದೀಗ ಮನೆಯಲ್ಲಿ ನೆಗೆದಾಡಿ ಓಡಾಡಿಕೊಂಡಿರುವ 10 ದಿವಸದ ಮತ್ತು 13 ದಿವಸದ ಗಂಡು ಕರುಗಳಿಗೆ ಸೋಮವಾರ ನೂರಾರು ಜನರ ಸಮ್ಮುಖದಲ್ಲಿ ಹಮ್ಮಿಕೊಂಡಿದ್ದ ತೊಟ್ಟಿಲಶಾಸ್ತ್ರ ಮತ್ತು ನಾಮಕರಣ ಶಾಸ್ತ್ರದ ಸಾನ್ನಿಧ್ಯ ವಹಿಸಿ ಶಿವ ಮತ್ತು ಬಸವ ಎಂದು ನಾಮಕರಣ ಮಾಡಿ ಶ್ರೀಗಳು ಮಾತನಾಡಿದರು.

ಸಂಪ್ರದಾಯದಂತೆ ಆಕಳ ಕರುಗಳಿಗೆ ತೊಟ್ಟಿಲಲ್ಲಿ ಹಾಕಿ ಶಿವ ಮತ್ತು ಬಸವ ಎಂದು ನಾಮಕರಣ ಮಾಡಿ ಆರತಿ ಎತ್ತಿ, ಶೋಬಾನೆ ಪದ ಹಾಡುವ ಮೂಲಕ ತೊಟ್ಟಿಲಶಾಸ್ತ್ರ ಪೂರೈಸಿದರು. ಈ ಸಂದರ್ಭದಲ್ಲಿ ಈರಮ್ಮ ಮಡಿವಾಳರ, ನಾಗರಾಜ ಮಡಿವಾಳರ, ಎಸ್.ಪಿ. ಬಳಿಗಾರ, ತಿಪ್ಪಣ್ಣ ಸಂಶಿ, ಫಕ್ಕೀರೇಶ ಮ್ಯಾಟಣ್ಣವರ, ಜಗದೀಶ ಹುಲಿಗೆಮ್ಮನವರ, ಶಿದ್ಲಿಂಗೇಶ ಮರಳಹಳ್ಳಿ ಹಾಗೂ ಮನೆಯ ಸದಸ್ಯರೆಲ್ಲರೂ ಹಾಜರಿದ್ದರು.

> ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಮಾತನಾಡಿ, ಸರಕಾರ ಏನೆಲ್ಲ ಕಠಿಣ ಕಾನೂನು ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದರೂ ಸಹ ಸಮಾಜದಲ್ಲಿ ಗೋಹತ್ಯೆ ನಡೆಯುತ್ತಲೇ ಇದೆ. ರೈತರ ಜೀವನಾಡಿಯಾಗಿರುವ, ದೇವಾನುದೇವತೆಗಳನ್ನು ತನ್ನ ದೇಹದಲ್ಲಿ ಅಡಗಿಸಿಕೊಂಡಿರುವ ಗೋವಿಗೆ ಕಾಮದೇನು ಎನ್ನುತ್ತಾರೆ. ಗೋವು ಮನೆಯಲ್ಲಿದ್ದರೆ ಧನ-ಕಗಳಿಗಿಂತಲೂ ಮಿಗಿಲು ಎನ್ನುವ ಶ್ರೀಮಂತಿಕೆ ಹಸುವಿನಲ್ಲಿರುತ್ತದೆ. ಗೋವನ್ನು ಜೋಪಾನ ಮಾಡುವದರಿಂದ ಅನೇಕ ರೋಗ-ರುಜಿನಗಳು ನಮ್ಮಿಂದ ದೂರವಾಗುತ್ತವೆ, ಬಡತನ ದೂರವಾಗುತ್ತದೆ. ಈ ನಿಟ್ಟಿನಲ್ಲಿ ದೇಸೀ ಹಸುಗಳನ್ನು ಬೆಳೆಸುವ ಕಾರ್ಯ ಮಾಡುವಂತೆ ಕರೆ ನೀಡಿದರು.


ಕರ್ನಾಟಕ ಸರ್ಕಾರ

## ಗ್ರಾಮ ಪಂಚಾಯತ ಕಾರ್ಯಾಲಯ, ಬೆಳವಣಕಿ

ತಾಲೂಕ : ರೋಣ e-mail : belavanaki.ron.gdg@gmail.com ಜಿಲ್ಲಾ : ಗದಗ

ನಂ: ಗ್ರಾ.ಪಂ./ಬೆಳವಣಕಿ/ ಟೆಂಡರ/2025-26/09 ದಿನಾಂಕ: 05-01-2026

## ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ (ದ್ವಿ-ಲಕೋಟಿ)

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ ನಿಯಮಗಳನ್ವಯ ಅರ್ಹ ಗುತ್ತೇದಾರ/ಸರಬುದಾರ ರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, ಮುಖಾಂತರ 02 ಕಾಮಗಾರಿಯ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2025-26ನೇ ಸಾಲಿನ MGNREGA ಯೋಜನೆ ಅಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರ/ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, **https://kppp.karnataka.gov.in** ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆಗಳು ಈ ಕೆಳಗಿನಂತೆ ಇರುತ್ತವೆ.

| ಕ್ರ.ಸಂ. | ಇಂಡೆಂಟ್ ನಂಬರ | ಟೆಂಡರಿಗಿಟ್ಟ ಮೊತ್ತ |
|---|---|---|
| 1 | RDPR/2025-26/IND13030 | ರೂ. 744118.41 |
| 2 | RDPR/2025-26/IND13031 | ರೂ. 744118.41 |

ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ನಂತೆ ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಕೆಪಿಪಿ ಪೋರ್ಟಲ್ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ:-06-01-2026 ರಿಂದ 13-01-2026 ರಂದು 16.00 ಗಂಟೆಯವರೆಗೆ. ತಾಂತ್ರಿಕ ಬಿಡ್ ಟೆಂಡರ ತೆರೆಯುವ ದಿನಾಂಕ: 14-01-2026 ರಂದು 16.30 ಗಂಟೆಗೆ ಆರ್ಥಿಕ ಬಿಡ್ ದಿ: 16-01-2026 ರಂದು 11.30 ಗಂಟೆಗೆ ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ ಆಗಿದೆ/ -**
ಪಂಚಾಯತ ಅಭಿವೃದ್ಧಿ ಅದಿಕಾರಿಗಳು,
ಗ್ರಾಮ ಪಂಚಾಯತ ಬೆಳವಣಕಿ
ತಾಲೂಕ: ರೋಣ, ಜಿಲ್ಲಾ : ಗದಗ.


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka